ನಮ್ಮ ಜನ
NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 303 ಶೀರ್ಷಿಕೆ ಕೋಡ್: ಕೆಎಆರ್ ಕೆಎನ್ 28269 ಚಿತ್ರದುರ್ಗ ದಿನಾಂಕ: 25–06–2024 ಮಂಗಳವಾರ ಪುಟ: 4 ಬೆಲೆ : ರೂ.2–00
Volume - 01 Issue - 303 Title- Code: KARKAN 28269 Chitradurga Date: 25-06-2024 Tuesday Page: 4 Price: Rs. 2-00

ಒಳಪುಟದ ಸುದ್ದಿಗಳು
ಭ್ರಷ್ಟಾಚಾರಕ್ಕೆ ಕಡಿವಾಣ ಹಾಕಲು ಲೋಕಪಾಲ್: ನ್ಯಾ.ಎಲ್.ನಾರಾಯಣಸ್ವಾಮಿ 2
ಭಿಕ್ಷಾಟನೆ ತೊರೆದು ಸ್ವಾವಲಂಬಿ ಜೀವನ ನಡೆಸಿ: ಜಿ.ಪದ್ಮಾವತಿ 3
ಜೂನ್ 27ರಂದು ನಾಡಪ್ರಭು ಕೆಂಪೇಗೌಡ ಜಯಂತಿ: ಅರ್ಥಪೂರ್ಣ ಆಚರಣೆ 4

ಸುದ್ದಿ, ಜಾಹಿರಾತಿಗೆ 9686622252

ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ, ಗುಣ ನೋಡಿ ಗೆಳೆತನ ಮಾಡು , ಯಾಕೆಂದರೆ ಬಟ್ಟೆ ಹರಿದು ಹೋಗುವ ತನಕ ಮಾತ್ರ ಇರುತ್ತದೆ, ಗುಣ ಸಾಯುವವರೆಗೂ ಇರುತ್ತದೆ !!

» ಶುಭೋದಯ

ಇಂದಿರಾಗಾಂಧಿ ತುರ್ತು ಪರಿಸ್ಥಿತಿ ಹೇರಿಕೆಗೆ 49 ವರ್ಷ
ಕಾಂಗ್ರೆಸ್ ಕಚೇರಿ ಮುತ್ತಿಗೆ ಬಿಜೆಪಿ ಯತ್ನ

» ಚಿತ್ರದುರ್ಗ

ದೇಶದ ಪ್ರಧಾನಿಯಾಗಿದ್ದ ಇಂದಿರಾಗಾಂಧಿ ತುರ್ತು ಪರಿಸ್ಥಿತಿಯನ್ನು ಹೇರಿ ಇಂದಿಗೆ 49 ವರ್ಷಗಳಾಗಿರುವ ಹಿನ್ನೆಲೆಯಲ್ಲಿ ಜಿಲ್ಲಾ ಕಾಂಗ್ರೆಸ್ ಕಚೇರಿಗೆ ಮುತ್ತಿಗೆ ಹಾಕಲು ಬಂದ ಬಿಜೆಪಿ. ಕಾರ್ಯಕರ್ತರನ್ನು ಪೊಲೀಸರು ಅಡ್ಡಗಟ್ಟಿ 25 ಮಂದಿಯನ್ನು ಬಂಧಿಸಿ ಗ್ರಾಮಾಂತರ ಠಾಣೆಗೆ ಕರೆದೊಯ್ದು ನಂತರ ಬಿಡುಗಡೆಗೊಳಿಸಿದರು.

ಅಧಿಕಾರವನ್ನು ದುರುಪಯೋಗಪಡಿಸಿಕೊಂಡ ಇಂದಿರಾಗಾಂಧಿ ತುರ್ತು ಪರಿಸ್ಥಿತಿ ಹೇರಿ ವಿಪಕ್ಷದವರನ್ನು ಜೈಲಿಗಟ್ಟಿದ್ದರಲ್ಲದೆ ಮಾಧ್ಯಮದವರ ಕತ್ತು ಹಿಸುಕಿ ಡಾ.ಬಿ.ಆರ್.ಅಂಬೇಡ್ಕರ್ ದೇಶಕ್ಕೆ ಕೊಟ್ಟಿರುವ ಸಂವಿಧಾನವನ್ನೇ ಬುಡಮೇಲು ಮಾಡಿದ್ದರು. ಹಾಗಾಗಿ ರಾಹುಲ್‌ಗಾಂಧಿ ದೇಶದ ಜನರ ಕ್ಷಮೆ ಕೇಳುವಂತೆ ಕಾಂಗ್ರೆಸ್ ಕಚೇರಿಗೆ ಮುತ್ತಿಗೆ ಹಾಕಿದ ಬಿಜೆಪಿ. ಕಾರ್ಯಕರ್ತರು ಕಾಂಗ್ರೆಸ್ ವಿರುದ್ಧ ಧಿಕ್ಕಾರಗಳನ್ನು ಕೂಗಿದರು.

ಬಿಜೆಪಿ.ಯವರು ಕಾಂಗ್ರೆಸ್ ಕಚೇರಿಗೆ ಮುತ್ತಿಗೆ ಹಾಕುವುದಕ್ಕಿಂತ ಒಂದುವರೆ ಗಂಟೆ ಮುಂಚೆಯೇ ಒನಕೆ ಓಬವ್ವ ವೃತ್ತದ ಸುತ್ತಲೂ ಬ್ಯಾರಿಕೇಡ್‌ಗಳನ್ನು ಅಡ್ಡವಿಟ್ಟ

ಪೊಲೀಸರು ಸರ್ಪಗಾವಲಾಗಿ ನಿಂತಿದ್ದರು. ಕೆಲವು ನಿಮಿಷಗಳ ಕಾಲ ಪೊಲೀಸರು ಹಾಗೂ ಬಿಜೆಪಿ. ಕಾರ್ಯಕರ್ತರ ನಡುವೆ ಮಾತಿನ ಜಟಾಪಟಿಯೂ ನಡೆಯಿತು.

ತುರ್ತು ಪರಿಸ್ಥಿತಿ ಹೇರಿದ್ದನ್ನು ನೆನಪಿಸಿಕೊಂಡರೆ ಕರಾಳ ದಿನ ಕಣ್ಣ ಮುಂದೆ ಬಂದಂತಾಗುತ್ತದೆ. ರಾಜ್ಯದಲ್ಲಿ ಅಧಿಕಾರ ನಡೆಸುತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಒಂದು ರೀತಿಯಲ್ಲಿ ತುರ್ತು ಪರಿಸ್ಥಿತಿಯನ್ನು ಹೇರುತ್ತಿದ್ದಾರೆ. ಕಾನೂನು ಸುವ್ಯವಸ್ಥೆ ಹದಗೆಟ್ಟಿದ್ದು, ಹತ್ಯೆ ,ಕೊಲೆ, ಸುಲಿಗೆ ನಿರಂತರವಾಗಿ ನಡೆಯುತ್ತಿದೆ. ಹೈಕೋರ್ಟ್ ತೀರ್ಪಿನ ವಿರುದ್ಧ ಇಂದಿರಾಗಾಂಧಿ ದೇಶದಲ್ಲಿ ತುರ್ತು ಪರಿಸ್ಥಿತಿಯನ್ನು ಹೇರಿ ಪ್ರಶ್ನಿಸಿದವರನ್ನು ಜೈಲಿಗಟ್ಟುತ್ತಿದ್ದರು. ಅಜ್ಜಿ ಮಾಡಿದ ತಪ್ಪಿಗೆ ಕಾಂಗ್ರೆಸ್ ಯುವ ನಾಯಕ ರಾಹುಲ್‌ಗಾಂಧಿ ಕ್ಷಮೆ ಕೇಳಬೇಕು ಎಂದು ಪ್ರತಿಭಟನಾಕಾರರು ಗರ್ಜಿಸಿದರು.

ತುರ್ತು ಪರಿಸ್ಥಿತಿಯಲ್ಲಿ ಸಂವಿಧಾನಕ್ಕೆ ಅವಮಾನವಾಗಿದೆ. ಪ್ರಜಾಪ್ರಭುತ್ವದ ನಾಲ್ಕನೆ ಅಂಗ ಪತ್ರಿಕಾರಂಗವನ್ನು ಮಟ್ಟ ಹಾಕಿದ ಇಂದಿರಾಗಾಂಧಿ ನಂತರ ಚುನಾವಣೆಯಲ್ಲಿ ಸೋಲನುಭವಿಸಬೇಕಾಯಿತು. ತುರ್ತು ಪರಿಸ್ಥಿಯಂತ ಕರಾಳ ದಿನ ದೇಶದಲ್ಲಿ ಮತ್ತೆ ಮರುಕಳಿಸಬಾರದು ಎಂದು ಪ್ರತಿಭಟನಾನಿರತರು ಒತ್ತಾಯಿಸಿದರು.

ಬಿಜೆಪಿ. ಜಿಲ್ಲಾಧ್ಯಕ್ಷ ಎ.ಮುರಳಿ, ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷೆ ಸೌಭಾಗ್ಯ ಬಸವರಾಜನ್, ಪ್ರಧಾನ ಕಾರ್ಯದರ್ಶಿಗಳಾದ ಜಿ.ಟಿ.ಸುರೇಶ್‌ಸಿದ್ದಾಪುರ, ಜಿ.ಎಸ್.ಸಂಪತ್‌ಕುಮಾರ್, ಕೆ.ಮಲ್ಲಿಕಾರ್ಜುನ್, ಮಾಧ್ಯಮ ವಕ್ತಾರ ದಗ್ಗೆಶಿವಪ್ರಕಾಶ್, ವಕ್ತಾರ ನಾಗರಾಜ್‌ಬೇದ್ರೆ, ಜಿ.ಹೆಚ್.ಮೋಹನ್, ಗ್ರಾಮಾಂತರ ಮಂಡಲ ಅಧ್ಯಕ್ಷ ಜಿ.ಎಸ್.ಕಲ್ಲೇಶಯ್ಯ, ನಂದಿ ನಾಗರಾಜ್, ತಿಪ್ಪೇಸ್ವಾಮಿ ಓಬವ್ವ, ಚಂದ್ರು, ಪರಶುರಾಮ್, ಕಲ್ಲಂಸೀತಾರಾಮರೆಡ್ಡಿ, ನಗರಸಭೆ ಸದಸ್ಯ ಹರೀಶ್, ಎನ್.ವೀಣ, ಶಾಂತಮ್ಮ, ಅರುಣಕುಮಾರಿ, ಸುಮ, ಕಾಂಚನ, ನಾಗರಾಜ್, ಅಭಿಲಾಷ್, ಕೆ.ಸಿ.ತಿರುಮಲೇಶ, ತಿಪ್ಪೇರುದ್ರಸ್ವಾಮಿ ಹೊಸಹಳ್ಳಿ ಸೇರಿದಂತೆ ಕಾರ್ಯಕರ್ತರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.



ಇಂದು ದೆಹಲಿಯ ಸಂಸತ್ ಭವನದಲ್ಲಿ ನೂತನ ಚಿತ್ರದುರ್ಗ ಸಂಸದರಾಗಿ ಕನ್ನಡದಲ್ಲಿ ಪ್ರಮಾಣವಚನ ಸ್ವೀಕಾರ ಮಾಡಿದ ಗೋವಿಂದ್ ಎಂ.ಕಾರಜೋಳರವರು.

ಸನ್ಮಾನ್ಯ ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿಜಿ ಅವರ ನೇತೃತ್ವದ ನೂತನ ಸಚಿವ ಸಂಪುಟದಲ್ಲಿ ಕೇಂದ್ರ ಗೃಹ ಮತ್ತು ಸಹಕಾರ ಖಾತೆ ಸಚಿವರಾಗಿ ಅಧಿಕಾರ ವಹಿಸಿಕೊಂಡಿರುವ ಮಾನ್ಯ ಅಮಿತ್ ಷಾ ಜಿ ರವರನ್ನು ಮಾಜಿ ಕೇಂದ್ರ ಸಚಿವರಾದ ಡಾ.ಜಿ.ಎಂ ಸಿದ್ದೇಶ್ವರ ರವರು ಕುಟುಂಬ ಸದಸ್ಯರೊಂದಿಗೆ ಭೇಟಿಯಾಗಿ, ಅಭಿನಂದನೆ ಸಲ್ಲಿಸಿದರು. ಈ ಸಂಧರ್ಭದಲ್ಲಿ ಮಾಜಿ ಕೇಂದ್ರ ಸಚಿವರಾದ ಡಾ.ಶ್ರೀ ಜಿ.ಎಂ.ಸಿದ್ದೇಶ್ವರ ರವರು , ದಾವಣಗೆರೆ ಲೋಕಸಭಾ ಕ್ಷೇತ್ರದ ಮುಖಂಡರಾದ ಶ್ರೀಮತಿ ಗಾಯತ್ರಿ ಸಿದ್ದೇಶ್ವರ ರವರು ಬಿಜೆಪಿ ಯುವ ಮುಖಂಡರಾದ ಜಿ.ಎಸ್ ಅನಿತ್ ಕುಮಾರ್ ರವರು , ಅಶ್ವಿನಿ ಜಿ ಎಸ್ ರವರು ಉಪಸ್ಥಿತರಿದ್ದರು.

ಫಾಸ್ಟ್ ನ್ಯೂಸ್

ಜು.03 ರಂದು ರಸ್ತೆ ಸುರಕ್ಷತಾ ಸಮಿತಿ ಸಭೆ

» ಚಿತ್ರದುರ್ಗ

ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿ ಸಭೆ ಜುಲೈ 03 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆಯಲಿದೆ. ಸಭೆಯ ಅಧ್ಯಕ್ಷತೆಯನ್ನು ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಅವರು ವಹಿಸುವರು ಎಂದು ಸಮಿತಿಯ ಸದಸ್ಯ ಕಾರ್ಯದರ್ಶಿಯಾಗಿರುವ ಲೋಕೋಪಯೋಗಿ ಇಲಾಖೆ ಕಾರ್ಯಪಾಲಕ ಇಂಜಿನಿಯರ್ ಅವರು ತಿಳಿಸಿದ್ದಾರೆ.

ಜೂ. 26 ರಂದು ಕೆಡಿಪಿ ಪ್ರಗತಿ ಪರಿಶೀಲನಾ ಸಭೆ

» ಚಿತ್ರದುರ್ಗ

ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆ ಜೂ. 26 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆಯಲಿದೆ. ಸಭೆಯ ಅಧ್ಯಕ್ಷತೆಯನ್ನು ಯೋಜನೆ ಹಾಗೂ ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ. ಸುಧಾಕರ್ ಅವರು ವಹಿಸುವರು ಎಂದು ಜಿ.ಪಂ. ಸಿಇಒ ಸೋಮಶೇಖರ್ ತಿಳಿಸಿದ್ದಾರೆ.

ಮಾನವ ಹಕ್ಕು ಆಯೋಗದ ಸದಸ್ಯರ ಪ್ರವಾಸ

» ಚಿತ್ರದುರ್ಗ

ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ ನ್ಯಾಯಾಂಗ ಸದಸ್ಯರಾದ ಎಸ್.ಕೆ. ವಂಟಿಗೋಡಿ ಅವರು ಜುಲೈ 01 ರಂದು ಚಿತ್ರದುರ್ಗ ಜಿಲ್ಲೆಗೆ ಆಗಮಿಸಲಿದ್ದಾರೆ. ಎಸ್.ಕೆ. ವಂಟಿಗೋಡಿ ಅವರು ಅಂದು ಮಧ್ಯಾಹ್ನ 01.30 ಗಂಟೆಗೆ ಚಿತ್ರದುರ್ಗ ನಗರದ ಪ್ರವಾಸಿ ಮಂದಿರಕ್ಕೆ ಆಗಮಿಸುವರು, ಬಳಿಕ ಸ್ಥಳೀಯ ವಿವಿಧ ಹಾಸ್ಟೆಲ್‌ಗಳಿಗೆ ಭೇಟಿ ನೀಡುವರು. ಅದೇ ದಿನ ಸಂಜೆ 7 ಗಂಟೆಗೆ ಬೆಂಗಳೂರಿಗೆ ಪ್ರಯಾಣ ಬೆಳೆಸುವರು ಎಂದು ಆಯೋಗದ ಸದಸ್ಯರ ಆಪ್ತ ಕಾರ್ಯದರ್ಶಿ ತಿಳಿಸಿದ್ದಾರೆ.

ಲೋಕಾಯುಕ್ತ ಅಧಿಕಾರಿಗಳ ಪ್ರವಾಸ: ಅಹವಾಲು ಸ್ವೀಕಾರ

» ಚಿತ್ರದುರ್ಗ

ಕರ್ನಾಟಕ ಲೋಕಾಯುಕ್ತ ಚಿತ್ರದುರ್ಗ ವಿಭಾಗದ ಅಧಿಕಾರಿಗಳು ಜಿಲ್ಲೆಯ ಎಲ್ಲ ತಾಲ್ಲೂಕುಗಳಿಗೆ ಭೇಟಿ ನೀಡಿ ಸಾರ್ವಜನಿಕರಿಂದ ದೂರು ಅಹವಾಲುಗಳನ್ನು ಸ್ವೀಕರಿಸುವ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ. ಲೋಕಾಯುಕ್ತ ಪೊಲೀಸ್ ನಿರೀಕ್ಷಕರು ಜೂ. 27 ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 01.30 ರವರೆಗೆ ಹೊಸದುರ್ಗ, ಮೊಳಕಾಲ್ಮೂರು ತಾಲ್ಲೂಕು ಪಂಚಾಯಿತಿ ಕಚೇರಿಯಲ್ಲಿ ಹಾಗೂ ಅದೇ ದಿನ ಮಧ್ಯಾಹ್ನ 2.30 ರಿಂದ ಸಂಜೆ 05.30 ರವರೆಗೆ ಚಳ್ಳಕೆರೆ ತಾಲ್ಲೂಕು ಪಂಚಾಯತಿ ಕಚೇರಿಯಲ್ಲಿ ಉಪಸ್ಥಿತರಿದ್ದು, ಸಾರ್ವಜನಿಕರಿಂದ ದೂರು, ಅಹವಾಲುಗಳನ್ನು ನಿಗದಿತ ಅರ್ಜಿ ನಮೂನೆಯಲ್ಲಿ ಸ್ವೀಕರಿಸುವರು. ಜೂ.28 ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 01.30 ರವರೆಗೆ ಹಿರಿಯೂರು ತಾ.ಪಂ., ಮಧ್ಯಾಹ್ನ 2.30 ರಿಂದ ಸಂಜೆ 05.30 ರವರೆಗೆ ಚಿತ್ರದುರ್ಗ ತಾಲ್ಲೂಕು ಪಂಚಾಯತಿ ಕಚೇರಿಯಲ್ಲಿ ಪೊಲೀಸ್ ನಿರೀಕ್ಷಕರು. ಅದೇ ದಿನ ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 01.30 ರವರೆಗೆ ಹೊಳಲ್ಕೆರೆ ತಾಲ್ಲೂಕು ಪಂಚಾಯತಿ ಕಚೇರಿಯಲ್ಲಿ ಪೊಲೀಸ್ ಉಪಾಧೀಕ್ಷಕರು ಸಾರ್ವಜನಿಕರಿಂದ ದೂರು, ಅಹವಾಲುಗಳನ್ನು ಸ್ವೀಕರಿಸುವರು. ಸಾರ್ವಜನಿಕರು ತಮ್ಮ ದೂರು, ಅಹವಾಲುಗಳನ್ನು ನಿಗದಿತ ನಮೂನೆ 01 ಮತ್ತು 02 ರಲ್ಲಿ ಸಲ್ಲಿಸಬಹುದಾಗಿದೆ ಎಂದು ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪ್ರಮುಖ ಸುದ್ದಿ

ನಿರಂತರವಾಗಿ ಶಿಕ್ಷಕರ ಕಷ್ಟಗಳಿಗೆ ಸ್ಪಂದಿಸುವೆ: ಎಂಎಲ್ಸಿ

» ಹೊಸದುರ್ಗ

ನಿರಂತರ ಆಶ್ರಮವಹಿಸಿ ನನ್ನ ಗೆಲುವಿಗೆ ಕಾರಣರಾದ ನನ್ನ ಕ್ಷೇತ್ರದ ಎಲ್ಲಾ ಶಾಸಕರು ಸಚಿವರು ಹಾಗೂ ಮತದಾರ ಬಂಧುಗಳನ್ನುಎಂದಿಗೂಮರೆಯುವುದಿಲ್ಲ, ನಿರಂತರವಾಗಿ ಶಿಕ್ಷಕರ ಕಷ್ಟಗಳಿಗೆ ಸ್ಪಂದಿಸುವೆ, ಶಿಕ್ಷಕರಿಗೆ ಸಂಬಂಧಿಸಿದಂತೆ ಎಲ್ಲಾ ಕ್ಷೇತ್ರಗಳಲ್ಲಿನ ಸಮಸ್ಯೆಗಳ ಅರಿವಿದೆ. ಏಳನೇ ವೇತನ ಆಯೋಗ ಜಾರಿ, ಒ.ಪಿ.ಎಸ್ ಜಾರಿ, ಅನುದಾನಿತ ಶಾಲೆಗಳ ಬಲಪಡಿಸುವಿಕೆ, ಶಿಕ್ಷಕರ ನೇಮಕಾತಿ ಪ್ರಕ್ರಿಯೆಗೆ ಸಂಬಂಧಿಸಿದಂತೆ ಪ್ರಾಮಾಣಿಕ ಪ್ರಯತ್ನ ಮಾಡಿ, ಸಮಸ್ಯೆಗಳಿಗೆ ಅಂತ್ಯ ಹಾಡುವೆ. ಮತದಾರರ ಆಶೀರ್ವಾದಕ್ಕೆ ಚ್ಯುತಿ ಬಾರದಂತೆ ಕಾರ್ಯ ನಿರ್ವಹಿಸುವೆ ಎಂದು ವಿಧಾನ ಪರಿಷತ್ ಸದಸ್ಯ ಡಿ.ಟಿ. ಶ್ರೀನಿವಾಸ್ ಭರವಸೆ ನೀಡಿದರು

ನಗರದ ಸಿದ್ಧರಾಮೇಶ್ವರ ಸಮುದಾಯ ಭವನದಲ್ಲಿ ಶನಿವಾರ ಆಯೋಜಿಸಿದ್ದ ' ಅಭಿನಂದನಾ ಸಮಾರಂಭ' ದಲ್ಲಿ ಅಭಿನಂದನೆ ಸ್ವೀಕರಿಸಿ ಮಾತನಾಡಿದರು.

ಶಿಕ್ಷಕರ ಕ್ಷೇತ್ರಕ್ಕೆ ಸಂಬಂಧಿಸಿದಂತೆ ವೇತನ ತಾರತಮ್ಯ , ಅನುದಾನಿತ ಶಾಲಾ ಶಿಕ್ಷಕರು ಅತಂತ್ರ ಸ್ಥಿತಿ, ಖಾಲಿ ಹುದ್ದೆಗಳು, 414 ಕ್ಕೂ ಅಧಿಕ ಅನುದಾನಿತ ಶಾಲೆಗಳು ಸರ್ಕಾರದ ಆದೇಶಕ್ಕೆ ಎದುರು ನೋಡುತ್ತಿರುವುದು,

ಎಷ್ಟೋ ಜನ ಶಿಕ್ಷಕರಿಗೆ ನಿಗದಿತ ಸಮಯದಲ್ಲಿ ಸಂಬಳ ಆಗುತ್ತಿಲ್ಲ, ಶೇ. 100 ರಷ್ಟು ಡಿಪ್ಲೋಮಾ ಕಾಲೇಜುಗಳಲ್ಲಿ ಪ್ರಾಂಶುಪಾಲರಿಲ್ಲ, ವರ್ಗಾವಣೆಯಲ್ಲಿ ಪಾರದರ್ಶಕತೆ ಇಲ್ಲದಿರುವುದು ಹೀಗೆ ಹತ್ತು ಹಲವು ಸಮಸ್ಯೆಗಳು ಇನ್ನೂ ಜೀವಂತವಾಗಿವೆ. ಈ ಭಾಗದಲ್ಲಿ 1952 ರಿಂದಲೂ ಕಾಂಗ್ರೆಸ್ ಗೆಲುವು ಸಾಧಿಸಿಲ್ಲ, ಇದೇ ಮೊದಲ ಬಾರಿಗೆ ಗೆಲುವು ಸಾಧಿಸಿದೆ. ರಾಜ್ಯದಲ್ಲಿ ನಮ್ಮದೆ ಸರ್ಕಾರವಿದ್ದು, ಸಂಪೂರ್ಣವಾಗಿ ತೊಡಗಿಸಿಕೊಂಡು ಕಾರ್ಯ ನಿರ್ವಹಿಸುವೆ ಎಂದು ಭರವಸೆ ನೀಡಿದರು.

ನಮ್ಮ ರಾಜ್ಯದಲ್ಲಿ ಹಣಕಾಸು ಮುಗ್ಗಟ್ಟು ಎದುರಾಗುವಂತೆ ಮಾಡಿರುವುದು ಬಿಜೆಪಿ ಸರ್ಕಾರ, ಅವರೇ ಪಾಪರ್ ಮಾಡಿ ಹೋಗಿದ್ದಾರೆ. ಕಾಂಗ್ರೆಸ್ ಸರ್ಕಾರ ಸುಭದ್ರವಾಗಿದೆ. ಸಿದ್ಧರಾಮಯ್ಯ ನೇತೃತ್ವದ ಸರ್ಕಾರ ಗ್ಯಾರಂಟಿ ನೀಡುವುದರ ಜೊತೆಗೆ ಅಭಿವೃದ್ಧಿ ಕಾರ್ಯಗಳಿಗೂ ಒತ್ತು ನೀಡಿದೆ, ಹಣಕಾಸಿನ ತೊಂದರೆ ಎದುರಾಗದಂತೆ ನಿಭಾಯಿಸುತ್ತಿದೆ ಎಂದು ಶಾಸಕ ಬಿ.ಜಿ. ಗೋವಿಂದಪ್ಪ ಹೇಳಿದರು.

ಮಾಜಿ ಮುಖ್ಯಮಂತ್ರಿ 'ಎಸ್. ನಿಜಲಿಂಗಪ್ಪ, ಹಾಗೂ ಮಾಜಿ ಸಚಿವ ಏಕಾಂತಯ್ಯ ಸೇರಿದಂತೆ ಹಲವು ಮುತ್ಸದ್ದಿ ರಾಜಕಾರಣಿಗಳು ಜಿಲ್ಲೆಯ ಅಭಿವೃದ್ಧಿಗೆ ಶ್ರಮಿಸಿದ್ದಾರೆ. ಜಿಲ್ಲೆಯ ಕಾಂಗ್ರೆಸ್ ಶಾಸಕರುಗಳು ಅಭಿವೃದ್ಧಿಗೆ ಶ್ರಮಿಸುತ್ತಿದ್ದು, ಸಮರ್ಥರಿದ್ದಾರೆ, ಈ ಬಗ್ಗೆ ನೂತನ ಸಂಸದರಿಗೆ ಆಲಸ್ಯ ಬೇಡ. ಎಲ್ಲಾ ತಾಲ್ಲೂಕುಗಳಲ್ಲಿ ಭದ್ರಾ ಮೇಲ್ದಂಡೆ ಯೋಜನೆ ಬಗ್ಗೆಯೇ ಮಾತನಾಡುತ್ತಾರೆ, ನೀರಾವರಿ ಸಚಿವರಾಗಿದ್ದ ಅವಧಿಯಲ್ಲಿ ಜಿಲ್ಲೆಗೆ ಎಷ್ಟು ಬಾರಿ ಭೇಟಿ ನೀಡಿದ್ದೀರಾ? ಭದ್ರಾ ಮೇಲ್ದಂಡೆ ಯೋಜನೆ ಕಾಮಗಾರಿ ವೀಕ್ಷಣೆ ಮಾಡಿದ್ದೀರಾ? ಲೆಕ್ಕ ಕೊಡಿ ಎಂದು ಸಂಸದ ಗೋವಿಂದ ಎಂ ಕಾರಜೋಳ ವಿರುದ್ಧ ಹರಿಹಾಯ್ದರು.

367 ಕೆರೆಗಳಿಗೆ ನೀರು ತುಂಬಿಸಲು ಅನುಮತಿ ನೀಡಿದ್ದು ಕಾಂಗ್ರೆಸ್ ಸರ್ಕಾರ. ಮಾಡದಕೆರೆ ಹಾಗೂ ಕಸಬಾ ಹೋಬಳಿ ಕೆರೆಗಳಿಗೆ ಸದ್ಯದಲ್ಲೇ ಭದ್ರಾ ನೀರು ಬರಲಿದ್ದು, ಪ್ರಥಮ ಫಲಾನುಭವಿಗಳು ಹೊಸದುರ್ಗ ತಾಲ್ಲೂಕಿನವರಾಗುತ್ತಾರೆ. ಇಲ್ಲಿ ನೂತನ ಸಂಸದರು ಮಾಡುವಂತ ಕೆಲಸವಿಲ್ಲ. ಜಿಲ್ಲೆ ಅಭಿವೃದ್ಧಿಯಾಗಿಲ್ಲ ಎಂಬ ಮಾತನ್ನು ಹಿಂಪಡೆಯಿರಿ. ರಾಜ್ಯ ಸರ್ಕಾರದ ವಿರುದ್ಧ ಮಾತನಾಡದೆ, ಕೇಂದ್ರದಿಂದ ಅನುದಾನ ತಂದು ಬಾಕಿ ಉಳಿದಿರುವ ಅಭಿವೃದ್ಧಿ ಕಾರ್ಯಗಳನ್ನು ಮುಂದುವರಿಸಿರಿ. ಮಾತು ಕಡಿಮೆ ಮಾಡಿ, ಕೆಲಸ ಮಾಡಿ, ಎಂದು ಕಾರಜೋಳ ಅವರಿಗೆ ಪರೋಕ್ಷವಾಗಿ ತರಾಟೆಗೆ ತೆಗೆದುಕೊಂಡರು.

' ಕಾಂಗ್ರೆಸ್ ಅಭ್ಯರ್ಥಿ ಬಿ.ಎನ್. ಚಂದ್ರಪ್ಪ ಅವರನ್ನು ಗೆಲ್ಲಿಸಿಬೇಕೆಂದು ಬಹಳ ಕೆಲಸ ಮಾಡಿದರೂ, ಸೋಲಾಗಿದೆ. ಜನರ ತೀರ್ಪಿಗೆ ಬದ್ಧರಾಗಿದ್ದು, ಸ್ವಾಗತಿಸುತ್ತೇವೆ. ಮತದಾರರ ಮನಸ್ಸು ಗೆಲ್ಲುವುದರಲ್ಲಿ ವಿಫಲರಾಗಿದ್ದೇವೆ. ಈ ಸೋಲಿನ ಹೊಣೆ ಹೊರುತ್ತೇವೆಂದು ಶಾಸಕರು ಭಾವುಕರಾದರು.'

ಸೋತರೂ, ಗೆದ್ದರೂ ಜನ ಸಂಪರ್ಕ ಹೊಂದಿದ್ದಾರೆ. ಕ್ಷೇತ್ರದ ಜನತೆಗೆ ದುಡಿದಿದ್ದೇನೆ. ಜಾತ್ಯಾತೀತ ಹಾಗೂ ಪಕ್ಷಾತೀತವಾಗಿ ಪ್ರಾಮಾಣಿಕವಾಗಿ ಕೆಲಸ ಮಾಡಿದರೂ ಸೋಲಾಗಿದೆ.

ಪುಟ 2

ಚಿನ್ನದ ಬೆಲೆ	
91.6 ಕೆಡಿಎಂ (ಗ್ರಾಂ)	5830
85 ಕೆಡಿಎಂ (ಗ್ರಾಂ)	5330

ಬೆಳ್ಳಿ ಬೆಲೆ	
ಕೆಜಿ	67500

ಫಾಸ್ಟ್ ನ್ಯೂಸ್

ವೆಂಕಟೇಶ್ ಬಾಬುಗೆ ಪಿಎಚ್‌ಡಿ

» ದಾವಣಗೆರೆ

ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ವಾಣಿಜ್ಯಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕ ಎಸ್.ವೆಂಕಟೇಶ್ ಬಾಬು ರವರಿಗೆ ಮೈಸೂರು ವಿಶ್ವವಿದ್ಯಾಲಯವು ಪಿಎಚ್‌ಡಿ ಪದವಿ ನೀಡಿದೆ. ವೆಂಕಟೇಶ್ ಬಾಬುರವರು ಮೈಸೂರು ವಿಶ್ವವಿದ್ಯಾನಿಲಯದ ಜೆಎಸ್‌ಎಸ್ ಸಂಶೋಧನಾ ಕೇಂದ್ರದ ವಾಣಿಜ್ಯಶಾಸ್ತ್ರ ವಿಭಾಗದ ಪ್ರಾಧ್ಯಾಪಕರಾದ ಡಾ ಶಂಕ್ರಪ್ಪ ಎಸ್ ರವರ ಮಾರ್ಗದರ್ಶನದಲ್ಲಿ ಪರ್ಫಾರ್ಮೆನ್ಸ್ ಇವ್ಯಾಲ್ಯೂಯೇಷನ್ ಆಫ್ ಡಿಜಿಟಲ್ ಪ್ರಿಂಟಿಂಗ್ ಅಂಡ್ ಪಬ್ಲಿಸಿಂಗ ಇಂಡಸ್ಟ್ರಿ ಇನ್ ಇಂಡಿಯಾ. ಎಂಬ ವಿಷಯದ ಕುರಿತು ಮಹಾ ಪ್ರಬಂಧವನ್ನು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಿದರು. ಮೈಸೂರು ವಿಶ್ವವಿದ್ಯಾಲಯವೂ ಇವರ ಮಹಾ ಪ್ರಬಂಧವನ್ನು ಅಂಗೀಕರಿಸಿ ವಾಣಿಜ್ಯ ಶಾಸ್ತ್ರ ವಿಭಾಗದಲ್ಲಿ ಪಿಎಚ್‌ಡಿ ಪದವಿಯನ್ನು ನೀಡಿದೆ. ಶ್ರೀ ವೆಂಕಟೇಶ್ ಬಾಬು ರವರು ದಾವಣಗೆರೆ ವಾಸಿ ದಿ.ಟಿ ಶಿವಾನಂದ್ ಸಿತಿಮನಿ ಹಾಗೂ ಶಾಂತಮ್ಮ ರವರ ಪುತ್ರರಾಗಿರುತ್ತಾರೆ.

ನಿರಂತರವಾಗಿ ಶಿಕ್ಷಕರ ಕಷ್ಟಗಳಿಗೆ ಸ್ಪಂದಿಸುವೆ: ಎಂಎಲ್ಸಿ

» ಮೊದಲ ಪುಟದಿಂದ

ಎದೆಗುಂದದೆ ಈ ಅನೀರಿಕ್ಷಿತ ಸೋಲನ್ನು ಸ್ವೀಕರಿಸುವೆ ಎಂದು ಮಾಜಿ ಸಂಸದೆ ಬಿ.ಎನ್. ಚಂದ್ರಪ್ಪ ಆತ್ಮವಿಶ್ವಾಸ ವ್ಯಕ್ತಪಡಿಸಿದರು.' ಈ ವೇಳೆ ಕೆಪಿಸಿಸಿ ಸದಸ್ಯರುಗಳಾದ ಎಂ.ಪಿ. ಶಂಕರ್, ಅಲ್ತಾಫ್ ಪಾಷಾ, ಮಾಜಿ ಶಾಸಕರಾದ ಪೂರ್ಣಿಮಾ ಶ್ರೀನಿವಾಸ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರುಗಳಾದ ಪದ್ಮನಾಭ್, ಲೋಕೇಶ್ವರಪ್ಪ, ಮುಖ್ಯ ಶಿಕ್ಷಕರ ಸಂಘದ ಅಧ್ಯಕ್ಷ ಟಿ.ಶೇಖರಪ್ಪ, ಸಹ ಶಿಕ್ಷಕರ ಸಂಘದ ಅಧ್ಯಕ್ಷ ಪ್ರಕಾಶ್, ಉಪನ್ಯಾಸಕರ ಸಂಘದ ಅಧ್ಯಕ್ಷ ಕಾಂತ್ ರಾಜ್ ಎ, ದೈಹಿಕ ಶಿಕ್ಷಕರ ಸಂಘದ ಅಧ್ಯಕ್ಷ ಮಹಾಂತೇಶ್, ಟಿಎಪಿಸಿಎಂಎಸ್ ಅಧ್ಯಕ್ಷ ಕಾರೇಹಳ್ಳಿ ಬಸವರಾಜ್, ಕಾಂಗ್ರೆಸ್ ಮುಖಂಡರುಗಳಾದ ಗೋ. ತಿಪ್ಪೇಶ್, ಯಶ್ವಂತ್ ಗೌಡ, ರಾಜೇಂದ್ರ ಪ್ರಸಾದ್, ದೀಪಿಕಾ ಸತೀಶ್, ಎಂ.ಎಚ್ ಕೃಷ್ಣಮೂರ್ತಿ,ಲೋಕೇಶ್ವರಪ್ಪ,ನಾಯಿಗೆರೆ ಚಂದ್ರಶೇಖರ್, ಕೆಂಚಪ್ಪ, ಹನುಮನಾಯ್ಕ್, ಟಿ. ರವೀಂದ್ರ, ಅಜ್ಜಪ್ಪ ಬನಸೀಹಳ್ಳಿ, ಕೆ.ಸಿ ನಿಂಗಪ್ಪ, ಸುಬ್ಬಣ್ಣ , ನೇತ್ರಾವತಿ, ಇಲ್ಕಲ್ ಅಜ್ಜಪ್ಪ, ಸಹ ಶಿಕ್ಷಕರ ಸಂಘದ ಕಾರ್ಯದರ್ಶಿ ಶಶಿಧರ್, ಜಯಣ್ಣ ಐಟಿಐ ಕಾಲೇಜು ಉಪನ್ಯಾಸಕರು, ಸುರೇಶ್ ಆರ್. ಲಕ್ಷ್ಯಯ್ಯ ಸೇರಿದಂತೆ ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಶಿಕ್ಷಕರುಗಳಿದ್ದರು.

೩ರಂದು ಸಾಧಕರಿಗೆ ಸನ್ಮಾನ

» ಚಿತ್ರದುರ್ಗ

ನಗರದ ಶ್ರೀ ಗಾನಯೋಗಿ ಸಂಗೀತ ಬಳಗದಿಂದ ಲಿಂ.ಪಂ.ಪಂಚಾಕ್ಷರ ಗವಾಯಿಗಳ 80ನೇ ಹಾಗೂ ಲಿಂ.ಡಾ.ಪಂ.ಪುಟ್ಟರಾಜ ಕವಿ ಗವಾಯಿಗಳ

14ನೇ ಪುಣ್ಯ ಸ್ಮರಣೋತ್ಸವ ಮತ್ತು ಗಣನೀಯ ಸೇವಾ ಸಾಧಕರಿಗೆ ಸನ್ಮಾನ ಕಾರ್ಯಕ್ರಮವೂ ಜೂ.30ರ ಸಂಜೆ 5 ಗಂಟೆಗೆ ನಗರದ ಶಾರದಮ್ಮ ರುದ್ರಪ್ಪ ಕಲ್ಯಾಣ ಮಂಟಪದಲ್ಲಿ ಹಮ್ಮಿಕೊಳ್ಳಲಾಗಿದೆ.

ಸಭಾ ಕಾರ್ಯಕ್ರಮದ ಸಾನಿಧ್ಯವನ್ನು ಶಿವಶರಣ ಮಾದಾರ ಚನ್ನಯ್ಯ ಗುರುಪೀಠದ ಬಸವಮೂರ್ತಿ ಮಾದಾರ ಚನ್ನಯ್ಯ ಶ್ರೀಗಳು, ಅಧ್ಯಕ್ಷತೆಯನ್ನು ಶ್ರೀ ಗಾನಯೋಗಿ ಸಂಗೀತ ಬಳಗದ ಅಧ್ಯಕ್ಷರಾದ ಎಂ.ತೋಟಪ್ಪ ಉತ್ತಂಗಿ ವಹಿಸಲಿದ್ದಾರೆ. ಕಾರ್ಯಕ್ರಮದಲ್ಲಿ ಶ್ರೀಮತಿ ಶಾರದಮ್ಮ ರುದ್ರಪ್ಪ, ಡಿ.ಎಸ್.ಸುರೇಶ್ ಬಾಬು, ನಿವೃತ್ತ ಪ್ರಚಾರ್ಯರಾದ ಸಿ.ಎಂ. ಚಂದ್ರಪ್ಪ, ಶ್ರೀ ಗಾನಯೋಗಿ ಸಂಗೀತ ಬಳಗದಗೌರವಾಧ್ಯಕ್ಷರಾದಎಸ್.ವಿ.ಗುರುಮೂರ್ತಿ, ಉಪಾಧ್ಯಕ್ಷರಾದ ಎಲ್.ಎಸ್.ಚಿನ್ಮಯಾನಂದ, ಉಪ ಸಮಿತಿಯ ಅಧ್ಯಕ್ಷರಾದ ಶ್ರೀಮತಿ ಸುಮಾ ರಾಜಶೇಖರ್ ಭಾಗವಹಿಸಲಿದ್ದಾರೆ. ಶ್ರೀಮತಿ ಪ್ರೇಮ ಬಾಲಚಂದಪ್ಪ ಮತ್ತು ಶ್ರೀಮತಿ ನಳಿನಾ ರವರಿಂದ ಉಪನ್ಯಾಸ ನಡೆಯಲಿದೆ.

ಇದೇ ಸಂದರ್ಭದಲ್ಲಿ ಗಣನೀಯ ಸೇವಾ ಸಾಧಕರಾದ ಚಲನಚಿತ್ರ ನಟಿ, ನಾಟಕ ರಚನಕಾರರಾದ ಜಯಲಕ್ಷ್ಮೀ ಪಾಟೀಲ್, ಜಿಲ್ಲಾ ಆಸ್ಪತ್ರೆಯ ಶುಶ್ರೂಷಕರಾದ ಎಂ.ಮಲ್ಲಣ್ಣ, ಲಿಂಗನ ಬಂಡಿಯ ತಬಲವಾದಕರಾದ ಸಿದ್ದೇಶ್ ಕುಮಾರ್ ಹಾಗೂ ಕೀ ಬೋರ್ಡ ವಾದಕರಾದ ಸಾಯಿ ಪ್ರಸಾದ್‌ರವರನ್ನು ಸನ್ಮಾನಿಸಲಾಗುವುದು.ಸಂಜೆ 4 ಗಂಟೆಯಿಂದ ನಗರದ ನೀಲಕಂಠೇಶ್ವರ ದೇವಾಲಯದಿಂದ ಪುಷ್ಪಾಲಂಕೃತ ಬೆಳ್ಳಿ ರಥದಲ್ಲಿ ಉಭಯ ಶ್ರೀಗಳ ಭಾವಚಿತ್ರದೊಂದಿಗೆ ಹೊಳಲ್ಕೆರೆಯ ಮೂಲಕ ಶ್ರೀಮತಿ ಶಾರದಮ್ಮ ರುದ್ರಪ್ಪ ಕಲ್ಯಾಣ ಮಂಟಪದಲ್ಲಿ ತಲುಪಲಿದೆ.

ಇಂದು ಪೂರ್ವಭಾವಿ ಸಭೆ

» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲೆಗೆ ಜು. 9 ರಂದು ಆಗಮಿಸುವ ಕರ್ನಾಟಕಜ್ಯೋತಿರಥಯಾತ್ರೆಯನ್ನುಗೌರವದಿಂದ ಬರಮಾಡಿಕೊಳ್ಳಲು ಹಾಗೂ ಬೀಳ್ಕೊಡಲು ಅಗತ್ಯ ಸಿದ್ದತೆ ಕೈಗೊಳ್ಳುವ ಕುರಿತು ಇದೇ ಜೂನ್ 25 ರಂದು ಬೆಳಿಗ್ಗೆ 11.30 ಕ್ಕೆ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ, ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪೂರ್ವಭಾವಿ ಸಭೆಯನ್ನು ಆಯೋಜಿಸಲಾಗಿದೆ.

ಭ್ರಷ್ಟಾಚಾರಕ್ಕೆ ಕಡಿವಾಣ ಹಾಕಲು ಲೋಕಪಾಲ್

» ದಾವಣಗೆರೆ

ಜನಪ್ರತಿನಿಧಿಗಳು ಹಾಗೂ ಸರ್ಕಾರಿ ನೌಕರರ ಭ್ರಷ್ಟಾಚಾರಕ್ಕೆ ಕಡಿವಾಣ ಹಾಕುವ ನಿಟ್ಟಿನಲ್ಲಿ ಲೋಕಪಾಲ್ ಮತ್ತು ಲೋಕಾಯುಕ್ತರ ಕಾಯಿದೆ ಜಾರಿಗೆ ತರಲಾಗಿದ್ದು, ಈ ಕಾಯ್ದೆಗೆ ಸಂಸತ್ತು ಅಂಗೀಕಾರ ನೀಡಿದ್ದು, ಈ ನಿಟ್ಟಿನಲ್ಲಿ ಸಾಮಾನ್ಯ ನೌಕರರಿಂದ ಹಿಡಿದು ಪ್ರಧಾನ ಮಂತ್ರಿಗಳು ಸಹ ಲೋಕಪಾಲ್ ವ್ಯಾಪ್ತಿಯಡಿಯಲ್ಲಿ ಬರುತ್ತಾರೆ ಎಂದು ನ್ಯಾಯಮೂರ್ತಿ ಎಲ್.ನಾರಾಯಣಸ್ವಾಮಿ ತಿಳಿಸಿದರು.

ನಗರದ ಆರ್‌ಎಲ್‌ಕಾನೂನು ಕಾಲೇಜಿನಲ್ಲಿ ಐಕ್ಯೂಎಸಿ ನೇತೃತ್ವದಲ್ಲಿ ಜಿಲ್ಲಾ ವಕೀಲರ ಸಂಘ ಇವರ ಸಹಯೋಗದಲ್ಲಿ ಲೋಕಪಾಲ್ ಮತ್ತು ಲೋಕಾಯುಕ್ತರ ಕಾಯಿದೆ 2013 ಕುರಿತು ರಾಷ್ಟ್ರ ಮಟ್ಟದ ಕಾರ್ಯಗಾರ ಉದ್ಘಾಟಿಸಿ ಮಾತನಾಡಿದರು.

ಭಾರತದಲ್ಲಿ ಲೋಕಪಾಲ್ ಮಸೂದೆ ಅಡಿ ಭ್ರಷ್ಟಾಚಾರ ಕಾನೂನು ಜಾರಿಗೊಳಿಸಲು ಲೋಕಪಾಲರನ್ನು ನೇಮಿಸಲಾಗಿದೆ. ಈ ಲೋಕಪಾಲ್ ಸಂಸ್ಥೆ ಸರ್ಕಾರದ ಅನುಮತಿಯಿಲ್ಲದೇಯೇ ರಾಜಕಾರಣಿಗಳು ಮತ್ತು ಸರ್ಕಾರಿ

ಅಧಿಕಾರಿಗಳನ್ನು ವಿಚಾರಣೆ ಹಾಗೂ ಶಿಕ್ಷೆಗೆ ಒಳಪಡಿಸುವ ಅಧಿಕಾರ ಹೊಂದಿದ್ದು, ಚುನಾವಣಾ ಆಯೋಗದಂತೆ ಸ್ವತಂತ್ರ ಸಂಸ್ಥೆಯಾಗಿದೆ ಎಂದು ತಿಳಿಸಿದರು.

ಭ್ರಷ್ಟಾಚಾರವನ್ನು ನಿಗ್ರಹಿಸುವ ಮತ್ತು ಮಾಹಿತಿದಾರರನ್ನು ರಕ್ಷಿಸುವ ಸಲುವಾಗಿ ಈ ಕಾಯ್ದೆಯಡಿ ಸಾದ್ಯವಾಗಿದೆ ಎಂದು ಪ್ರತಿಪಾದಿಸಿದರು.

ಜಿಲ್ಲಾ ವಕೀಲ ಸಂಘದ ಅಧ್ಯಕ್ಷ ಎಲ್. ಹೆಚ್. ಅರುಣ್‌ಕುಮಾರ್ ಮಾತನಾಡಿ, ಸರ್ಕಾರದ ಇಲಾಖೆಗಳಲ್ಲಿ ಲಂಚದ ಹಾವಳಿ ತಡೆಯುವ ಬಗ್ಗೆ ಚರ್ಚೆಗಳು ನಡೆದು ಸಮಿತಿ ರಚನೆಯಾಗಿ ತದ ನಂತರ 2013ರಲ್ಲಿ ಭಾರದ ಸಂಸತ್ತು ಲೋಕಪಾಲ್ ಮತ್ತು ಲೋಕಾಯುಕ್ತ ಸಂಸ್ಥೆಯನ್ನು ಅಂಗೀಕರಿಸಿತು. ಸರ್ಕಾರದ ವ್ಯವಸ್ಥೆಯಲ್ಲಿ ಲಂಚದ ದೂರುಗಳ ಬಗ್ಗೆ ವಿಚಾರಣೆ ನಡೆಸಲು ಕೇಂದ್ರದ ಮಟ್ಟದಲ್ಲಿ ಲೋಕಪಾಲ್ ಸಂಸ್ಥೆ, ರಾಜ್ಯಗಳ ಮಟ್ಟದಲ್ಲಿ ಲೋಕಾಯುಕ್ತ ಸಂಸ್ಥೆಗಳನ್ನು ಸ್ಥಾಪಿಸಲಾಯಿತು ಎಂದು ತಿಳಿಸಿದರು.

ಸಮಾರಂಭದ ಅಧ್ಯಕ್ಷತೆಯನ್ನು ಆರ್. ಎಲ್.ಕಾನೂನು ಕಾಲೇಜು ಪ್ರಾಂಶುಪಾಲ ಡಾ.ಜಿ.ಎಸ್.ಯತೀಶ್, ಐಕ್ಯೂಎಸಿ ಸಂಚಾಲಕ ಬಸವನಗೌಡ ಬಿ.ಪಿ. ಕಾರ್ಯಕ್ರಮದ ಸಂಯೋಜಕರಾದ ಡಾ.ಪಂಕಜಾ ಟಿ.ಸಿ, ಸಹಾಯಕ ಪ್ರಾಧ್ಯಾಪಕ ವಿಧ್ಯಾಧರ ವೇದಮೂರ್ತಿ ಟಿ.,ನಿವೃತ್ತ ಪ್ರಾಚಾರ್ಯ ಸೋಮಶೇಖರ್ ಸೇರಿದಂತೆ ಇತರರು ಇದ್ದರು.

ಮಳೆಗಾಗಿ ಪ್ರಾರ್ಥಿಸಿ ಕರಿಗಲ್ಲಿಗೆ ಗಂಗಾಭಿಷೇಕ

» ಹೊಸದುರ್ಗ

ತಾಲೂಕಿನ ಕಸಬಾ ಹೋಬಳಿ ಜೋಡಿ ಗ್ರಾಮದಲ್ಲಿ ಮಳೆಗಾಗಿ ಊರ ಮುಂದಿನ ಕರಿಗಲ್ಲಿಗೆ ನೂರೊಂದು ಬಿಂದಿಗೆ ಗಂಗಾಭಿಷೇಕ ಮಾಡುವುದರ ಮೂಲಕ ಮಳೆರಾಯನ ಬರವಿಗಾಗಿ ವಿಶಿಷ್ಟ ಪ್ರಾರ್ಥನೆ ಮಾಡಲಾಯಿತು.

ಬೆಳಿಗ್ಗೆಯಿಂದಲೇ ಗ್ರಾಮದ ಯುವಕರು ಮನೆ ಮನೆಗೆ ಹೋಗಿ ಪರವ ಮಾಡಲು ಅಕ್ಕಿ ಕಾಳು ಬೇಳೆ ದವಸ ಧಾನ್ಯಗಳನ್ನ ಸಂಗ್ರಹಿಸಿ ಗ್ರಾಮದ ಎಲ್ಲಾ ಮಹಿಳೆಯರು ಪುರುಷರಾಧಿಯಾಗಿ ಒಟ್ಟುಗೂಡಿ ಈ ಭಾಗದ ವಿಶೇಷ ಆಹಾರವಾದ ಮುದ್ದೆ ಅನ್ನ ಸಾಂಬಾರು ಹಾಗೂ ಪಾಯಸ ಮಾಡಿ ಶ್ರೀ ಆಂಜನೇಯ ಸ್ವಾಮಿ ಮತ್ತು ಈಶ್ವರ ದೇವರಿಗೆ ವಿಶೇಷ ಪೂಜೆ ಮಾಡಿಸಿ ಪ್ರಸಾದವನ್ನು ನೈವೇದ್ಯ ಮಾಡಿ ನಮ್ಮ ಊರಿಗೆ ಮಳೆ ಬಂದು ನಮ್ಮ ಊರಿನಿಂದ ಗಂಗೆ ನಾಡಿಗೆಲ್ಲಾ ಹರಿಯಲಿ ಎಂದು ವಿಶೇಷವಾಗಿ ಪ್ರಾರ್ಥಿಸಲಾಯಿತು..

ಕಾರ್ಯಕ್ರಮದಲ್ಲಿ ಗ್ರಾಮದ ಮುಖಂಡರಾದ ತಂಬಿನಕೆರೆ ಬಸವರಾಜ್, ಮಾಜಿ ಗ್ರಾ ಪಂ ಸದಸ್ಯ ರಾಜಪ್ಪ ರಮೇಶ್ ಗಿರೀಶ್ ರವಿಕುಮಾರ್, ಮಲ್ಲಿಕಾರ್ಜುನ್, ಲೋಕೇಶ್ ಟಿಸಿ ಮೂರ್ತಿ, ಬೀಸನಹಳ್ಳಿ ಪ್ರದೀಪ್, ಬಸವರಾಜ್, ಗೋವಿಂದಪ್ಪ ಟಿ ಕೆ ರಾಮಚಂದ್ರ ಚಾರ್, ಟಿ ಸಿ ಜಯಣ್ಣ ಹಾಗೂ ಗ್ರಾಮಸ್ಥರು ಹಾಜರಿದ್ದರು.

ನಾವು ಪ್ರತಿ ವರ್ಷ ಮಳೆ ಬರಲೆಂದು ದೇವರ ಮರೆಹೋಗಿ ನಮ್ಮ ಊರಿನ ಕರಿಗಲ್ಲಿಗೆ ನೂರೊಂದು ಬಿಂದಿಗೆ ಗಂಗಾಜಲವನ್ನ ಪ್ರೋಕ್ಷಣೆ ಮಾಡಿ ವಿಶೇಷ ಅಭಿಷೇಕ ಮಾಡುವುದರ ಮುಖಾಂತರ ಮಳೆರಾಯನ ಬರವಿಗಾಗಿ ಪ್ರಾರ್ಥಿಸುತ್ತೇವೆ. ಈ ಧಾರ್ಮಿಕ ಆಚರಣೆ ಮುಗಿದ ಬಳಿಕ ಮೂರು ದಿನದ ಒಳಗಾಗಿ ನಮ್ಮ ಊರಿಗೆ ಮಳೆ ಬಂದೇ ಬರುತ್ತದೆ, ಹಾಗೂ ನಾಡಿನ ತುಂಬೆಲ್ಲ ಮಳೆ ಬಂದು ರೈತರ ನೆಮ್ಮದಿ ಬದುಕಿಗೆ ಬೆಳಕಾಗಲಿ ಎಂದು ದೇವರಲ್ಲಿ ಪ್ರಾರ್ಥಿಸುತ್ತೇವೆ .

» ಶಿವಲೀಲಾ ರವಿಕುಮಾರ್, ಗೃಹಿಣಿ

ನೀಟ್ ಅಕ್ರಮ; ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮಕ್ಕೆ ಎಬಿವಿಪಿ ಒತ್ತಾಯ

» ಚಿತ್ರದುರ್ಗ

CSIR-UGC NET ಹಾಗೂ NEET ಪರೀಕ್ಷೆಗಳಲ್ಲಿನ ಅಕ್ರಮಗಳ ವಿರುದ್ಧ ಸಿಬಿಐ ತನಿಖೆ ನಡೆಸಿ ತಪ್ಪಿತಸ್ಥರನ್ನು ಪತ್ತೆ ಹಚ್ಚಿ ಕಠಿಣಕ್ರಮ ಕೈಗೊಳ್ಳಬೇಕೆಂದು ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ಆಗ್ರಹಿಸಿ ನವದೆಹಲಿಯ ಶಿಕ್ಷಣ ಸಚಿವರಿಗೆ ಜಿಲ್ಲಾಧಿಕಾರಿಗಳ ಮೂಲಕ ಮನವಿ ಮಾಡಲಾಯಿತು.

ರಾಷ್ಟ್ರೀಯ ಪರೀಕ್ಷಾಏಜೆನ್ಸಿ(NTA) ನಡೆಸುವCSIR-UGC-NET ಹಾಗೂ NEET ಪರೀಕ್ಷೆಗಳಲ್ಲಿ ಗಂಭೀರ ಲೋಪಗಳಾಗಿವೆ. CSIR-UGC-NET ಪರೀಕ್ಷೆಯ ವಿಶ್ವವಿದ್ಯಾಲಯಗಳಲ್ಲಿ ಪ್ರಾಧ್ಯಾಪಕರನ್ನು ನೇಮಿಸಲು ಹಾಗೂ ಕಿರಿಯ ಸಂಶೋಧನಾ ಫೆಲೋಗಳನ್ನು ರಾಷ್ಟ್ರೀಯ ಮಟ್ಟದಲ್ಲಿ ಆಯ್ಕೆ ಮಾಡಲು ನಡೆಸಲಾಗುತ್ತದೆ, ಅದೇರೀತಿಓಇಇಖಿ ಪರೀಕ್ಷೆಯು ವೈದ್ಯಕೀಯಕೋರ್ಸ್‌ಗಳಿಗೆ ಪ್ರವೇಶಾತಿ ಪಡೆಯಲು ನಡೆಸಲಾಗುತ್ತದೆ. ಈ ಬಾರಿಕ್ರಮವಾಗಿ ಸುಮಾರು 9 ಲಕ್ಷ ಹಾಗೂ 24 ಲಕ್ಷ ವಿದ್ಯಾರ್ಥಿಗಳು, ಈ ಎರಡು ಪರೀಕ್ಷೆಗಳನ್ನು ತೆಗೆದುಕೊಂಡಿರುತ್ತಾರೆ. ರಾಷ್ಟ್ರೀಯ ಮಟ್ಟದ ಮಹತ್ವ ಹಾಗೂ ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯವನ್ನು ಹೊಂದಿರುವ ಈ ಪರೀಕ್ಷೆಗಳಲ್ಲಿನ ಅಕ್ರಮಗಳಿಂದ ವಿದ್ಯಾರ್ಥಿ ಸಮುದಾಯದಲ್ಲಿ ಭವಿಷ್ಯದ ಬಗ್ಗೆ ಆತಂಕ ನಿರ್ಮಾಣವಾಗಿದೆ. ಈ ಪರೀಕ್ಷೆಗಳು ನ್ಯಾಯ ಸಮ್ಮತವಾದರೀತಿಯಲ್ಲಿ ನಡೆದಿಲ್ಲವೆಂದು ಸರ್ಕಾರಒಪ್ಪಿಕೊಂಡು ಸಿಬಿಐ ತನಿಖೆಗೆ ವಹಿಸಿದ್ದರು ಇದುವರೆಗೂ ಈ ಗಂಭೀರ ಲೋಪಗಳಿಗೆ ಯಾರನ್ನು ಹೊಣೆಗಾರರನ್ನಾಗಿ ಮಾಡಲಾಗಿಲ್ಲ ಹಾಗೂ ತಪ್ಪಿತಸ್ಥರನ್ನು ಪತ್ತೆ ಹಚ್ಚಿಲ್ಲ, ಮುಂದುವರೆದ ಆಧುನಿಕ 'ತಂತ್ರಜ್ಞಾನ ಹೊಂದಿರುವ ಈಸಂದರ್ಭದಲ್ಲಿಯೂ ಪರೀಕ್ಷಾ ವ್ಯವಸ್ಥೆಗಳಲ್ಲಿ ಲೋಪದೋಷಗಳಾಗದಂತೆ ನಡೆಸಿದಿರುವುದರಿಂದ ರಾಷ್ಟ್ರೀಯ ಪರೀಕ್ಷಾಏಜೆನ್ಸಿಯಕಾರ್ಯಕ್ಷಮತೆ ಮತ್ತು ನಂಬಿಕೆಯ ಮೇಲೆ ಬಲವಾದ ಪೆಟ್ಟು ಬಿದ್ದಿದೆ ಎಂದಿದ್ದಾರೆ.ವಿದ್ಯಾರ್ಥಿಗಳು ರಾಷ್ಟ್ರೀಯ ಮಟ್ಟದ ಪರೀಕ್ಷೆಗಳನ್ನು ಎದುರಿಸಲು ಸಾಕಷ್ಟು ಶ್ರದ್ಧೆಯೊಂದಿಗೆ ಸಮಯ ಹಾಗೂ ಹಣವನ್ನು ವ್ಯಯಿಸಿರುತ್ತಾರೆ. ಈ ಪರೀಕ್ಷೆಗಳಲ್ಲಿನ ಅಕ್ರಮಗಳಿಂದ ವರ್ಷಾನುಗಟ್ಟಲೆತಯಾರಿ ನಡೆಸಿದ ವಿದ್ಯಾರ್ಥಿಗಳು ಮಾನಸಿಕವಾಗಿ ಕುಗ್ಗಿ ಹೋಗಿದ್ದಾರೆ ಹಾಗೂ ಪಿ ಎಚ್ ಡಿ ಪ್ರವೇಶಾತಿ ಬಯಸಿದ ವಿದ್ಯಾರ್ಥಿಗಳು ಅತಂತ್ರರಾಗಿದ್ದಾರೆ.ಆದ್ದರಿಂದ ವಿದ್ಯಾರ್ಥಿಗಳ ಈ ತ್ರಿಶಂಕು ಸ್ಥಿತಿಯನ್ನು ಹಾಗೂ ಆತಂಕಗಳನ್ನು ನಿವಾರಿಸಿ ಸೂಕ್ತವಾದ ನ್ಯಾಯವನ್ನು ದೊರಕಿಸಿಕೊಡಬೇಕೆಂದು ಆಗ್ರಹಿಸುತ್ತಾ, ಮುಂದಿನ ಯಾವುದೇರೀತಿಯ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಲೋಪವಿರದಂತೆ ಪಾರದರ್ಶಕವಾಗಿ ನಡೆಸಬೇಕೆಂದು ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ಶಿಕ್ಷಣ ಸಚಿವಾಲಯವನ್ನುಒತ್ತಾಯಿಸುತ್ತದೆ, ಅಷ್ಟೇಅಲ್ಲದೆರಾಷ್ಟ್ರೀಯ ಪರೀಕ್ಷಾಏಜೆನ್ಸಿಯ ಹೊಣೆಗಾರಿಕೆಯನ್ನು ಹಾಗೂ ವ್ಯವಸ್ಥೆಗಳಲ್ಲಿನ ಲೋಪದೋಷಗಳನ್ನು ಪತ್ತೆ ಹಚ್ಚುವುದರೊಂದಿಗೆತಪ್ಪಿತಸ್ಥರಿಗೆಕಠಿಣ ಶಿಕ್ಷೆಯನ್ನು ವಿಧಿಸಬೇಕೆಂದು ಆಗ್ರಹಿಸುತ್ತದೆ.

ರೈತ ಸಮುದಾಯದ ಅಭ್ಯುದಯಕ್ಕಾಗಿ ಅಖಂಡ ಕರ್ನಾಟಕ ರೈತ ಸಂಘ ಸದಾಕಾರ್ಯಪ್ರವೃತ್ತ : ಸೋಮಗುದ್ದು ರಂಗಸ್ವಾಮಿ

» ಚಳ್ಳಕೆರೆ

ಕಳೆದ ಸುಮಾರು 40 ವರ್ಷಗಳಿಂದ ತಾಲ್ಲೂಕಿನಾದ್ಯಂತ ರೈತರನ್ನು ಜಾಗೃತಿಗೊಳಿಸಿ ಹೋರಾಟ ಮೂಲಕ ಸವಲತ್ತನ್ನು ಪಡೆಯುವ ಅವಕಾಶವನ್ನು ರೈತ ಸಂಘ ಮಾಡುವ ಮೂಲಕ ಸಾವಿರಾರು ರೈತರಿಗೆ ನೆರವು ನೀಡಿದೆ. ಆದರೆ, ಇತ್ತೀಚಿನ ದಿನಗಳಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ರೈತರ ಸಮಸ್ಯೆಗಳ ಬಗ್ಗೆ ನಿರ್ಲಕ್ಷ್ಯ ಧೋರಣೆ ತಾಳಿರುವುದು ನೋವಿನ ಸಂಗತಿ ಎಂದು ಅಖಂಡ ಕರ್ನಾಟಕ ರೈತ ಸಂಘದ ಸಂಸ್ಥಾಪಕ ಅಧ್ಯಕ್ಷ ಸೋಮಗುದ್ದುರಂಗಸ್ವಾಮಿ ತಿಳಿಸಿದರು.ನಗರದ ರೋಟರಿಬಾಲಭವನದಲ್ಲಿ ಅಖಂಡ ಕರ್ನಾಟಕ ರೈತ ಸಂಘದ ತಾಲ್ಲೂಕು ಘಟಕ ಸಭೆಯಲ್ಲಿ ಭಾಗವಹಿಸಿ ನೂತನ ಪದಾಧಿಕಾರಿಗಳ ನೇಮಕಪ್ರಕ್ರಿಯೆಯಲ್ಲಿ

ಪಾಲ್ಗೊಂಡು ಮಾತನಾಡಿದರು. ಇದೇ ಸಂದರ್ಭದಲ್ಲಿ ರೈತಸಂಘವನ್ನು ಗ್ರಾಮೀಣ ಭಾಗದ ಜನರತ್ತ ಕೊಂಡೊಯುವ ನಿಟ್ಟಿನಲ್ಲಿ ಚಳ್ಳಕೆರೆ ತಾಲ್ಲೂಕು ಹಾಗೂ ಪರಶುರಾಮಪುರ ಹೋಬಳಿಮಟ್ಟದಲ್ಲಿ ರೈತ ಸಂಘದ ಪದಾಧಿಕಾರಿಗಳ ಆಯ್ಕೆಯನ್ನು ನಡೆಸಲಾಯಿತು. ರೈತ ಸಂಘದ ತಾಲ್ಲೂಕು ಅಧ್ಯಕ್ಷರಾಗಿ ಜಾಜೂರಿನ ಎಚ್.ಗಿರೀಶ್‌ರೆಡ್ಡಿ, ಪ್ರಧಾನ ಕಾರ್ಯದರ್ಶಿಯಾಗಿ ಸಾಧಿಕ್‌ಸೂರನಹಳ್

ಫಾಸ್ಟ್ ನ್ಯೂಸ್

ಫಿಜಿಯೋಥೆರಪಿಸ್ಟ್ ನೇಮಕಾತಿಗೆ ಅರ್ಜಿ

» ಚಿತ್ರದುರ್ಗ

ಚಿತ್ರದುರ್ಗ ತಾಲ್ಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ ವತಿಯಿಂದ ನಡೆಯುವ ಗೃಹಾಧಾರಿತ ಮತ್ತು ಶಾಲಾಧಾರಿತ ಶಿಕ್ಷಣ ಪಡೆಯುತ್ತಿರುವ 93 ಮಕ್ಕಳಿಗೆ ಫಿಜಿಯೋಥೆರಪಿಸ್ಟ್ ಸೇವೆ ಪಡೆಯಲು ತಾತ್ಕಾಲಿಕ ನೇಮಕಾತಿ ಮಾಡಿಕೊಳ್ಳುವ ಸಂಬಂಧ ಅರ್ಜಿ ಆಹ್ವಾನಿಸಿದೆ. ಜೂನ್ 29 ಅರ್ಜಿ ಸಲ್ಲಿಸಲು ಕೊನೆಯ ದಿನ. ಡಿ.ಪಿ.ಟಿ, ಬಿ.ಪಿ.ಟಿ ಅರ್ಹ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳಿಂದ ಇದೇ ಜೂನ್ 29ರೊಳಗೆ ಅರ್ಜಿಗಳನ್ನು ಚಿತ್ರದುರ್ಗ ನಗರದ ಹಳೇ ಮಾಧ್ಯಮಿಕ ಶಾಲಾ ಆವರಣ ಬಿ.ಆರ್.ಸಿ ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಬಿ.ಐ.ಈ.ಆರ್.ಟಿ. ರಾಜಣ್ಣ ಅವರ ದೂರವಾಣಿ ಸಂಖ್ಯೆ 9880608391 ಗೆ ಸಂಪರ್ಕಿಸಬಹುದು ಎಂದು ಸಮಗ್ರ ಶಿಕ್ಷಣ ಕರ್ನಾಟಕ ಕ್ಷೇತ್ರ ಸಮನ್ವಯಾಧಿಕಾರಿ ತಿಳಿಸಿದ್ದಾರೆ.

ವಿದ್ಯಾರ್ಥಿ ನಿಲಯ ಪ್ರವೇಶಾತಿ: ಅರ್ಜಿ ಆಹ್ವಾನ

» ಚಿತ್ರದುರ್ಗ

2024–25ನೇ ಸಾಲಿಗೆ ಚಿತ್ರದುರ್ಗ ತಾಲ್ಲೂಕು ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿ ಬರುವ ಡಾ.ಬಿ.ಆರ್.ಅಂಬೇಡ್ಕರ್, ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕ, ಬಾಲಕಿಯರ ವಿದ್ಯಾರ್ಥಿ ನಿಲಯಗಳಿಗೆ ಪ್ರವೇಶಾತಿ ನೀಡಲು ಅವಕಾಶ ಕಲ್ಪಿಸಿದ್ದು, ಜೂನ್ 30 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಮೆಟ್ರಿಕ್ ಪೂರ್ವ ಬಾಲಕ, ಬಾಲಕಿಯರ ವಿದ್ಯಾರ್ಥಿ ನಿಲಯಗಳಿಗೆ ಅರ್ಜಿ ಸಲ್ಲಿಸಲು ಇಲಾಖಾ ಆನ್‌ಲೈನ್ ವೆಬ್‌ಸೈಟ್‌ನಲ್ಲಿ www.sw.kar.nic.in ಹಾಗೂ ಮ್ಯಾನ್ಯುಯಲ್ ಅರ್ಜಿಯನ್ನು ಸಲ್ಲಿಸಲು ಕೋರಿದೆ. ಎಲ್ಲಾ ಅಗತ್ಯ ದಾಖಲಾತಿಗಳೊಂದಿಗೆ ದೃಢೀಕೃತ ಅರ್ಜಿಯನ್ನು ಸಂಬಂಧಿಸಿದ ಡಾ.ಬಿ.ಆರ್.ಅಂಬೇಡ್ಕರ್, ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕ, ಬಾಲಕಿಯರ ವಿದ್ಯಾರ್ಥಿ ನಿಲಯಗಳ ವಾರ್ಡನ್ ಅವರಿಗೆ ಸಲ್ಲಿಸುವಂತೆ ಚಿತ್ರದುರ್ಗ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

ಮಾದಕ ವಸ್ತುವಿನ ವ್ಯಸನವನ್ನು ತಡೆಗಟ್ಟುವ ಕುರಿತು ಕಾರ್ಯಾಗಾರ

» ದಾವಣಗೆರೆ

ಜೂನ್ 26 ರಂದು ಬೆಳಿಗ್ಗೆ 11 ಗಂಟೆಗೆ ದೊಡ್ಡಬಾತಿಯತಪೋವನದಲ್ಲಿಅಂತರಾಷ್ಟ್ರೀಯ ಮಾದಕ ವಸ್ತುವಿನ ವಿರೋಧಿ ದಿನಾಚರಣೆಯ ಪ್ರಯುಕ್ತ ಮಾದಕ ವಸ್ತುವಿನ ವ್ಯಸನವನ್ನು ತಡೆಗಟ್ಟುವ ಕುರಿತು ಕಾರ್ಯಾಗಾರವನ್ನು ಆಯೋಜಿಸಲಾಗಿದೆ. ರಾಜ್ಯ ಮಟ್ಟದ ಸಮನ್ವಯ ಸಂಸ್ಥೆ ಕರ್ನಾಟಕ(ಪ್ರಾಯೋಜಿತ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯ ಭಾರತ ಸರ್ಕಾರ–ನವದೆಹಲಿ), ವಿಶೇಷ ಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ತಪೋವನ ಯೋಗ ಮತ್ತು ಪ್ರಕೃತಿ ಚಿಕಿತ್ಸಾ ಮೆಡಿಕಲ್ ಕಾಲೇಜು ಮತ್ತು ಆಸ್ಪತ್ರೆ, ತಪೋವನ ಆಯುರ್ವೇದ ಮೆಡಿಕಲ್ ಕಾಲೇಜು ಮತ್ತು ಆಸ್ಪತ್ರೆ, ತಪೋವನ ಇನ್ಸ್ಟಿಟ್ಯೂಟ್ ಆಫ್ ನರ್ಸಿಂಗ್ ದಾವಣಗೆರೆ ಇವರ ಸಹಯೋಗದಲ್ಲಿ ಆಯೋಜಿಸಲಾದ ಕಾರ್ಯಕ್ರಮವನ್ನುಜಿಲ್ಲಾಧಿಕಾರಿಡಾ.ವೆಂಕಟೇಶ್. ಎಂ.ವಿ ಉದ್ಘಾಟಿಸುವರು. ರಾಜ್ಯ ಮಟ್ಟದ ಸಮನ್ವಯ ಸಂಸ್ಥೆಯ ನಿರ್ದೇಶಕರು ಹಾಗೂ ತಪೋವನ ಸಮೂಹ ಸಂಸ್ಥೆಗಳ ಅಧ್ಯಕ್ಷರಾದ ಡಾ.ಶಶಿಕುಮಾರ್.ವಿ ಮೆಹರ್‌ವಾಡೆ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಜಿಲ್ಲಾ ವಿಶೇಷಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣಾಧಿಕಾರಿ ಡಾ.ಕೆ.ಕೆ.ಪ್ರಕಾಶ್, ತಪೋವನ ಆಯುರ್ವೇದ ಮೆಡಿಕಲ್ ಕಾಲೇಜು ಮತ್ತು ಆಸ್ಪತ್ರೆಯ ಪ್ರಾಂಶುಪಾಲರಾದ ಡಾ.ಅಶ್ವಿನಿ ಕೆ.ಆರ್, ತಪೋವನ ಯೋಗ ಮತ್ತು ಪ್ರಕೃತಿ ಚಿಕಿತ್ಸಾ ಮೆಡಿಕಲ್ ಕಾಲೇಜು ಮತ್ತು ಆಸ್ಪತ್ರೆಯ ಪ್ರಾಂಶುಪಾಲರಾದ ಡಾ.ಸುಮನಾ ಭಟ್, ತಪೋವನ ಇನ್ಸ್ಟಿಟ್ಯೂಟ್ ಆಫ್ ನರ್ಸಿಂಗ್ ಪ್ರಾಂಶುಪಾಲರಾದ ಶೈಲಜಾ.ಬಿ.ಆರ್ ಭಾಗವಹಿಸುವರು.

ಡಿಪ್ಲೋಮಾ ಪ್ರವೇಶಕ್ಕೆ ಅರ್ಜಿ ಆಹ್ವಾನ

» ದಾವಣಗೆರೆ

ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರದಲ್ಲಿ ಡಿಪ್ಲೋಮಾ ಕೋರ್ಸ್‌ಗಳಾದ ಡಿಪ್ಲೋಮಾ ಇನ್ ಟೂಲ್ & ಡೈ ಮೇಕಿಂಗ್, ಡಿಪ್ಲೋಮಾ ಇನ್ ಆಟೋಮೇಷನ್ & ರೊಬೊಟಿಕ್ಸ್, ಡಿಪ್ಲೋಮಾ ಇನ್ ಎಲೆಕ್ಟ್ರಿಕಲ್ & ಎಲೆಕ್ಟ್ರಾನಿಕ್ಸ್ ಇಂಜಿನಿಯರಿಂಗ್ ಮತ್ತು ಡಿಪ್ಲೋಮಾ ಇನ್ ಪ್ರಿಸಿಷನ್ ಮ್ಯಾನ್ಯುಫ್ಯಾಕ್ಚರಿಂಗ್, ಡಿಪ್ಲೋಮಾ ಕೋರ್ಸುಗಳ ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ವಿದ್ಯಾರ್ಥಿಗಳು ಮತ್ತು ಎಸ್.ಎಸ್.ಎಲ್.ಸಿ ಪಾಸಾದ ಅರ್ಹ ವಿದ್ಯಾರ್ಥಿಗಳು ಜಿಟಿಟಿಸಿ ಹರಿಹರ ಕೇಂದ್ರಕ್ಕೆ ನೇರವಾಗಿ ಸಂಪರ್ಕಿಸಿ ಆಪ್‌ಲೈನ್‌ನಲ್ಲಿ ಮೂಲಕ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಪ್ರಾಂಶುಪಾಲರು, ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ, ಪ್ಲಾಟ್ ನಂ:22 ಸಿ & ಡಿ ಕೆಐಎಡಿಬಿ ಇಂಡಸ್ಟ್ರಿಯಲ್ ಏರಿಯ ಹರ್ಲಾಪುರ,ಕೆಎಸ್‌ಆರ್‌ಟಿಸಿ ಡಿಪೋ ಹತ್ತಿರ ಹರಿಹರ ದೂ.ಸಂ. 9845941245 / 8711913947

ಭಿಕ್ಷಾಟನೆ ತೊರೆದು ಸ್ವಾವಲಂಬಿ ಜೀವನ ನಡೆಸಿ: ಮಹಿಳಾ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಜಿ.ಪದ್ಮಾವತಿ

» ಚಿತ್ರದುರ್ಗ

ಲಿಂಗತ್ವ ಅಲ್ಪಸಂಖ್ಯಾತರು ಭಿಕ್ಷಾಟನೆ ತೊರೆದು ಸ್ವಾಭಿಮಾನ ಹಾಗೂ ಸ್ವಾವಲಂಬಿ ಜೀವನ ನಡೆಸುವ ನಿಟ್ಟಿನಲ್ಲಿ ವಿವಿಧ ಉದ್ಯಮಗಳಲ್ಲಿ ತೊಡಗಬೇಕು. ಇದರಿಂದ ಉದ್ಯೋಗವು ಸೃಷ್ಟಿಯಾಗಲಿದೆ ಎಂದು ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಜಿ.ಪದ್ಮಾವತಿ ಹೇಳಿದರು.

ಚಿತ್ರದುರ್ಗ ತಾಲ್ಲೂಕಿನ ಕೊಳಹಾಳ್ ಭರಮಸಾಗರದ ಮಡಿಲು ಸ್ವಾವಲಂಬಿ ಟ್ರಸ್ಟ್‌ನ ಮಂಗಳಮುಖಿಯರು ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಪ್ರಾಯೋಜಕತ್ವದಲ್ಲಿ ರೂ.21.23 ಲಕ್ಷ ವೆಚ್ಚದಲ್ಲಿ ಸ್ಥಾಪಿಸಿರುವ ಕುರಿ ಸಾಕಾಣಿಕೆ ಘಟಕವನ್ನು ಸೋಮವಾರ ಉದ್ಘಾಟಿಸಿ ಅವರು ಮಾತನಾಡಿದರು.

ಮಹಿಳಾ ಅಭಿವೃದ್ಧಿ ನಿಗಮವು ಸಮಾಜದ ಕಟ್ಟ ಕಡೆಯ ಮಹಿಳೆ ಹಾಗೂ ದಮನಿತ ಮಹಿಳೆಯರ ಪರವಾಗಿದೆ. ಸಮಾಜದ ದುರ್ಬಲ ಹಾಗೂ ಶೋಷಿತ ಮತ್ತು ಅಸಹಾಯಕ ಮಹಿಳೆಯರನ್ನು ಆರ್ಥಿಕವಾಗಿ ಸಾಮಾಜಿಕವಾಗಿ ಸದೃಢಗೊಳಿಸುವ ನಿಟ್ಟಿನಲ್ಲಿ ನಿಗಮವು ಕಾರ್ಯಪ್ರವೃತ್ತವಾಗಿದೆ ಎಂದರು.

ಚಿತ್ರದುರ್ಗ ಭರಮಸಾಗರ ಸಮೀಪದ ಕೊಳಹಾ□□ನಲ್ಲಿ ಲಿಂಗತ್ವ ಅಲ್ಪಸಂಖ್ಯಾತರು ಸ್ಥಾಪಿಸಲು ಉದ್ದೇಶಿಸಿದ ಕೋಳಿ ಮತ್ತು ಕುರಿ–ಮೇಕೆ ಸಾಕಾಣಿಕೆ ಘಟಕವನ್ನು ವಿಶೇಷ ಪ್ರಕರಣ ಎಂದು ಪರಿಗಣಿಸಿ, ನಿಗಮದ ನಿರ್ದೇಶಕ ಮಂಡಳಿಯಲ್ಲಿ ಅನುಮೋದನೆಯ ನಂತರ, ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆಯಡಿ ರೂ.21.23 ಲಕ್ಷಗಳನ್ನು (ಶೇ.50ರಷ್ಟು ಸಾಲ ಮತ್ತು ಶೇ.50 ರಷ್ಟು ಸಹಾಯಧನ) ಅನುದಾನ ಬಿಡುಗಡೆ ಮಾಡಲಾಗಿದೆ ಎಂದರು.

ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಪ್ರಾಯೋಜಕತ್ವದಲ್ಲಿ ಮಡಿಲು ಸ್ವಾವಲಂಭಿ ಟ್ರಸ್ಟ್ ಕುರಿ ಘಟಕವನ್ನು ಸ್ಥಾಪಿಸಲಾಗಿದ್ದು, ತುಂಬಾ ಅತ್ಯುತ್ತಮವಾಗಿ ಹಾಗೂ ವಿಶಾಲವಾಗಿ ಕುರಿ ಸಾಕಾಣಿಕೆ ಘಟಕವನ್ನು ಸ್ಥಾಪಿಸಿರುವುದು, ಇಡೀ ರಾಜ್ಯಕ್ಕೆ ಮಾದರಿಯಾಗಿರುತ್ತಾರೆ. ಇವರನ್ನು ಪ್ರೇರಣೆಯಾಗಿ ತೆಗೆದುಕೊಂಡು ದುರ್ಬಲ ವರ್ಗದವರು ಹಾಗೂ ಸಮಾಜದಿಂದ ಶೋಷಣೆಗೆ ಒಳಗಾದವರು ಮುಖ್ಯವಾಹಿನಿಗೆ ಬರಬೇಕು ಎಂದು ಕೋರಿದರು.ರಾಜ್ಯ ಸರ್ಕಾರವು ಅನೇಕ ಅಭಿವೃದ್ಧಿ ನಿಗಮಗಳನ್ನು ಸ್ಥಾಪಿಸಿದ್ದು, ನಿಗಮಗಳ ಮೂಲಕ ಕಟ್ಟಕಡೆಯ ವ್ಯಕ್ತಿಗಳಿಗೆ, ದಮನಿತರಿಗೆ, ಧ್ವನಿ ಇಲ್ಲದವರಿಗೆ ಸಾಲ–ಸೌಲಭ್ಯವನ್ನು ತಲುಪಿಸುವ ನಿಟ್ಟಿನಲ್ಲಿ ಯೋಜನೆಗಳನ್ನು ಜಾರಿಗೊಳಿಸಿದ್ದು, ಅಧಿಕಾರಿಗಳು ಸೌಲಭ್ಯಗಳನ್ನು ಪ್ರಾಮಾಣಿಕವಾಗಿ ತಲುಪಿಸುವ ಕೆಲಸ ಮಾಡಬೇಕು. ಈ ಕೆಲಸವನ್ನು ನಿಗಮದ ವ್ಯವಸ್ಥಾಪಕ ನಿರ್ದೇಶಕಿ ಪುಷ್ಪಾಲತಾ ಅವರು ಮಾಡಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.ಯಾವುದೇ ರಾಜಕೀಯ ಪ್ರಭಾವ ಇಲ್ಲದೇ, ಮಡಿಲು ಸ್ವಾವಲಂಭಿ ಟ್ರ□□□□ನ ಅರುಂಧತಿ ಅವರ ಶ್ರಮ ಹಾಗೂ ಗುರಿಯನ್ನು ಗುರುತಿಸಿ, ನಿಗಮವು ಸಾಲ–ಸೌಲಭ್ಯ ನೀಡಿದೆ. ಹಾಗಾಗಿ ನೀವುಗಳು ಇತರರಿಗೂ ದಾರಿದೀಪವಾಗಬೇಕು ಎಂದು ಸಲಹೆ ನೀಡಿದರು.

9211ಲಿಂಗತ್ವಅಲ್ಪಸಂಖ್ಯಾತರಿಗೆಸೌಲಭ್ಯ: ಲಿಂಗತ್ವ ಅಲ್ಪಸಂಖ್ಯಾತರಿಗೆ(ಟ್ರಾನ್ಸ್–ಜೆಂಡರ್ಸ್) ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದಿಂದ 2012–13ನೇ ಸಾಲಿನಿಂದ ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆಯಡಿ ಆದಾಯ ಉತ್ಪನ್ನ ಚಟುವಟಿಕೆ ಕೈಗೊಳ್ಳಲು ರೂ.30,000/– ಸಹಾಯಧನ ನೀಡಲಾಗುತ್ತಿದೆ. ಈ ಯೋಜನೆಯಡಿ ಈವರೆಗೂ ಒಟ್ಟು 9,211 ಲಿಂಗತ್ವ ಅಲ್ಪಸಂಖ್ಯಾತರಿಗೆ ಸಾಲಸೌಲಭ್ಯ ಹಾಗೂ ಸಹಾಯಧನ ನೀಡಲಾಗಿದೆ. ಚಿತ್ರದುರ್ಗ ಜಿಲ್ಲೆಯಲ್ಲಿ ಒಟ್ಟು 136 ಲಿಂಗತ್ವ ಅಲ್ಪಸಂಖ್ಯಾತರಿಗೆ ಈ ಯೋಜನೆಯಡಿ ಸೌಲಭ್ಯ ನೀಡಲಾಗಿದೆ ಎಂದು ನಿಗಮದ ಅಧ್ಯಕ್ಷರು ತಿಳಿಸಿದರು.

ಚಿತ್ರದುರ್ಗ ಜಿಲ್ಲೆಯಲ್ಲಿ ಒಟ್ಟು 8,18,613 ಮಹಿಳೆಯರು ಇದ್ದು, ಇದರಲ್ಲಿ ಪ್ರಸ್ತುತ 232 ದೇವದಾಸಿ ಮಹಿಳೆಯರು, 2,850 ದಮನಿತ ಮಹಿಳೆಯರು ಇದ್ದಾರೆ ಎಂದರು.ನಿಗಮದ ವತಿಯಿಂದ ಜಿಲ್ಲೆಯಲ್ಲಿ ಉದ್ಯೋಗಿನಿ ಯೋಜನೆಯಡಿ 3,066 ಫಲಾನುಭವಿಗಳು, ಚೇತನ 115, ಧನಶ್ರೀ 121, ಲಿಂಗತ್ವ ಅಲ್ಪಸಂಖ್ಯಾತರು 129, ದೇವದಾಸಿ ಪುನರ್‌ವಸತಿ ಯೋಜನೆಯಡಿ 311, ಕಿರುಸಾಲ ಯೋಜನೆಯಡಿ 120 ಫಲಾನುಭವಿಗಳಿಗೆ ಸಾಲ ಸೌಲಭ್ಯ ಹಾಗೂ ಸಹಾಯಧನ ನೀಡಲಾಗಿದೆ ಎಂದರು.

ಲಿಂಗತ್ವ ಅಲ್ಪಸಂಖ್ಯಾತರನ್ನು ಸಮಾಜದ ಮುಖ್ಯವಾಹಿನಿಗೆ ತರುವ ನಿಟ್ಟಿನಲ್ಲಿ ರಾಜೀವ್ ಗಾಂಧಿ ವಸತಿ ನಿಗಮದ ಮೂಲಕ ಆದ್ಯತೆ ಮೇರೆಗೆ ಮನೆಗಳನ್ನು ನಿರ್ಮಿಸಲಾಗುವುದು. ಈ ನಿಟ್ಟಿನಲ್ಲಿ 3,403 ಮನೆಗಳನ್ನು ಸರ್ಕಾರದಿಂದ ಮಂಜೂರು ಮಾಡಲಾಗಿದೆ. ಪರಿಶಿಷ್ಟ ಜಾತಿ ಹಾಗೂ ಪಂಗಡಕ್ಕೆ ಸೇರಿದವರಿಗೆ ಡಾ.ಬಿ.ಆರ್.ಅಂಬೇಡ್ಕರ್ ನಿವಾಸ್ ಯೋಜನೆಯಡಿ ಹಾಗೂ ಇತರೆ ವರ್ಗಗಳಿಗೆ ದೇವರಾಜ ಅರಸು ವಸತಿ ಯೋಜನೆಯಡಿ ಪರಿಗಣಿಸಿಕೊಂಡು ವಸತಿ ಯೋಜನೆ ಅನುಷ್ಠಾನಗೊಳಿಸಲು ಕ್ರಮವಹಿಸಲಾಗಿದ್ದು, ಚಿತ್ರದುರ್ಗ ಜಿಲ್ಲೆಯಲ್ಲಿ 90 ಗುರಿ ಇದ್ದು, ಇದುವರೆಗೂ 86 ಅರ್ಜಿಗಳು ಸಲ್ಲಿಕೆಯಾಗಿವೆ ಎಂದು ಮಾಹಿತಿ ನೀಡಿದರು.

ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕಿ ಪುಷ್ಪಲತಾ ಮಾತನಾಡಿ, ಮಡಿಲು ಸ್ವಾವಲಂಬಿ ಟ್ರಸ್ಟ್‌ನ ಅರುಂಧತಿ ಅವರು ಸ್ವಾಭಿಮಾನ ಹಾಗೂ ಸ್ವಾವಲಂಬಿ ಜೀವನ ನಡೆಸುವ ಮೂಲಕ ಬದುಕು ಕಟ್ಟಿಕೊಂಡಿದ್ದಾರೆ. ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಲಿಂಗತ್ವ ಅಲ್ಪಸಂಖ್ಯಾತರ ಯೋಜನೆಯಡಿ ಸಾಲ ಸೌಲಭ್ಯ, ಸಹಾಯಧನ ನೀಡಲಾಗಿದೆ. ಅರುಂಧತಿ ತಂಡದವರು ಕುರಿ ಸಾಕಾಣಿಕೆ ಜತೆ ಜತೆಗೂ ಕೋಳಿ ಸಾಕಾಣಿಕೆಯನ್ನೂ ಮಾಡಿದ್ದಾರೆ. ಈ ಕುರಿತು ನಿಗಮದ ವತಿಯಿಂದ ಮುಂದಿನ ದಿನಗಳಲ್ಲಿ ಅಗತ್ಯ ತರಬೇತಿಯನ್ನೂ ನೀಡಲಾಗುವುದು ಎಂದು ತಿಳಿಸಿದರು.

ಮಡಿಲು ಸ್ವಾವಲಂಬಿ ಟ್ರಸ್ಟ್‌ನ ಅರುಂಧತಿ ಮಾತನಾಡಿ, ಆತ್ಮಹತ್ಯೆ ಮಾಡಿಕೊಳ್ಳುವಂತಹ ಸಂಕಷ್ಟದ ಪರಿಸ್ಥಿತಿಯ ಸಂದರ್ಭದಲ್ಲಿ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮವು ನೆರವು ಹಾಗೂ ಅಗತ್ಯ ಸಹಕಾರವನ್ನೂ ನೀಡಿದೆ. ನಿಗಮ ವತಿಯಿಂದ ಕುರಿ ಸಾಕಾಣಿಕೆ ಘಟಕಕ್ಕೆ ಸಾಲ ಸೌಲಭ್ಯ ಹಾಗೂ ಸಹಾಯಧನ ನೀಡಲಾಗಿದೆ. ಇದರಿಂದ ನನ್ನ ಜೀವನಕ್ಕೆ ದಾರಿದೀಪವಾಗಿ ಬೆಳಕು ನೀಡಿದಂತಾಗಿದೆ ಎಂದು ಹೇಳಿದರು.

ಸಮಾಜದಲ್ಲಿ ಮಂಗಳಮುಖಿಯರು ಕೇವಲ ಭಿಕ್ಷಾಟನೆ ಹಾಗೂ ಲೈಂಗಿಕತೆಗೆ ಮಾತ್ರಸೀಮಿತವಾಗಿದ್ದಾರೆ ಎಂಬ ಪರಿಕಲ್ಪನೆ ದೂರವಾಗಬೇಕು. ಈ ನಿಟ್ಟಿನಲ್ಲಿ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮವು ಲಿಂಗತ್ವ ಅಲ್ಪಸಂಖ್ಯಾತರಿಗೆ ಹೆಚ್ಚಿನ ಸಾಲಸೌಲಭ್ಯ ಹಾಗೂ ಸಹಾಯಧನ ನೀಡುವ ಮೂಲಕ ಮುಖ್ಯವಾಹಿನಿಗೆ ಬರಲು ಶ್ರಮಿಸಬೇಕು ಎಂದು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಚಿತ್ರದುರ್ಗ ತಹಶೀಲ್ದಾರ್ ಡಾ.ನಾಗವೇಣಿ, ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಪ್ರಧಾನ ವ್ಯವಸ್ಥಾಪಕರಾದ ಇಂದಿರಾ, ಅಕ್ಕಮಹಾದೇವಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಪವಿತ್ರ, ಜಿಲ್ಲಾ ನಿರೂಪಣಾಧಿಕಾರಿ ವಿಜಯ್ ಕುಮಾರ್, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಾದ ಎನ್.ಸುಧಾ, ವೀಣಾ ಸೇರಿದಂತೆ ಮಡಿಲು ಸ್ವಾವಲಂಬಿ ಟ್ರಸ್ಟ್‌ನ ಪದಾಧಿಕಾರಿಗಳು ಇದ್ದರು.

ಆದಿಜಾಂಬವ ನಿಗಮದ ಅಧ್ಯಕ್ಷರಾಗಿ ಮಂಜುನಾಥ್ ಅಧಿಕಾರ ಸ್ವೀಕಾರ

» ಚಿತ್ರದುರ್ಗ

ಆದಿಜಾಂಬವ ಅಭಿವೃದ್ಧಿ ನಿಗಮದಅಧ್ಯಕ್ಷರಾಗಿನೇಮಕವಾದಕೆಪಿಸಿಸಿ ಅಸಂಘಟಿತಕಾರ್ಮಿಕ ವಿಭಾಗದಅಧ್ಯಕ್ಷಜಿ. ಎಸ್.ಮಂಜುನಾಥ್‌ಅವರು ಬೆಂಗಳೂರಿನ ಯೂನಿಟಿ ಬಿಲ್ಡಿಂಗ್‌ನಲ್ಲಿರುವ ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮದಕಚೇರಿಯಲ್ಲಿಸೋಮವಾರಅಧಿಕಾರ ಸ್ವೀಕರಿಸಿದರು. ಈ ಸಂದರ್ಭದಲ್ಲಿ ಮಾಜಿ ಸಚಿವ ಹೆಚ್.ಆಂಜನೇಯ, ಮಾಜಿ ಸಂಸದಬಿ.ಎನ್.ಚಂದ್ರಪ್ಪ, ಕಂಠೀರವ ಸ್ಟುಡಿಯೋಅಧ್ಯಕ್ಷ ಮಹಮ್ಮದ್ ಪಾಷಾ, ನಿಗಮದ ವ್ಯವಸ್ಥಾಪಕ ನಿರ್ದೇಶಕ ಬಿ.ಟಿ.ಮಂಜುನಾಥ್, ಯುವಕಾಂಗ್ರೆಸ್ ಮುಖಂಡರವಿವರ್ಮ, ಬೈನರಿಅಪರಲ್ ಪಾರ್ಕ್‌ನಛೇರ್ಮನ್ ಕೆ.ಶ್ರೀನಿವಾಸ್ ಉಪಸ್ಥಿತರಿದ್ದರು.

ಅಕ್ರಮವಾಗಿ ಗಾಂಜಾಗಿಡಗಳನ್ನು ಬೆಳೆದಿದ ಆರೋಪಿತನಿಗೆ 1 ವರ್ಷ ಶಿಕ್ಷೆ ಮತ್ತು ರೂ.25000/-ದಂಡ

» ದಾವಣಗೆರೆ

ಜಗಳೂರು ತಾಲ್ಲೂಕು ಲಕ್ಕಂಪುರ ಗ್ರಾಮದ ಈರಪ್ಪ ಬಿನ್ ಕೆಂಗಪ್ಪ ಇವರಿಗೆ ಸೇರಿದ ಸರ್ವೆ ನಂ 25/*ರ ಜಮೀನಿನ ಮೇಲೆ ಉಪ ಆಯುಕ್ತರ ನಿರ್ದೇಶನದ ಮೇರೆಗೆ ಅಬಕಾರಿ ಉಪಅಧೀಕ್ಷಕರ ಮಾರ್ಗದರ್ಶನದಲ್ಲಿ ದಿನಾಂಕ:26–8–2021 ರಂದು ಅಬಕಾರಿ ದಾಳಿ ಮಾಡಲಾಗಿ ಈ ಜಮೀನನಲ್ಲಿ ಅಕ್ರಮವಾಗಿ 3,480 ಕೆ.ಜಿ ಗಾಂಜಾ ಗಿಡಗಳನ್ನು ಬೆಳೆದಿರುವುದು ಕಂಡು ಬಂದಿದ್ದು ಗಾಂಜಾ ಸಮೇತ ಜಮೀನಿನ ಮಾಲೀಕರನ್ನು ಬಂಧಿಸಿ ಪ್ರಕರಣ ದಾಖಲಿಸಿರುತ್ತಾರೆ.

ಪ್ರಕರಣ ತನಿಖೆಯನ್ನು ಅಬಕಾರಿ ಉಪ ನಿರೀಕ್ಷಕರಾದ ಎನ್ ಸಾವಿತ್ರಿ ಇವರು ನಡೆಸಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಇಲ್ಲಿ ದೋಷಾರೋಪಣಾ ಪಟ್ಟಿ ಸಲ್ಲಿಸಿದ್ದರು. ಸುಧೀರ್ಘ ವಿಚಾರಣೆ ನಡೆಸಿದ ಬಳಿಕ ನ್ಯಾಯಾಧೀಶರು ಆರೋಪಿಗೆ ಒಂದು ವರ್ಷ ಶಿಕ್ಷೆ ಮತ್ತು ರೂ.25,000 ದಂಡ ವಿಧಿಸಿದ್ದಾರೆ.

ಪ್ರಮುಖ ಸುದ್ದಿ

ಪೂರ್ವಭಾವಿ ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ

ಜೂ.30 ರಂದು ಕರ್ನಾಟಕ ಶಿಕ್ಷಕರ ಅರ್ಹತಾ ಪರೀಕ್ಷೆ: ಲೋಪದೋಷ ಆಗದಂತೆ ಎಚ್ಚರಿಕೆಯಿಂದ ಕಾರ್ಯನಿರ್ವಹಿಸಿ

» ಚಿತ್ರದು

ಫಾಸ್ಟ್ ನ್ಯೂಸ್

ದಾವಣಗೆರೆ: ವಿದ್ಯುತ್ ವ್ಯತ್ಯಯ

» ದಾವಣಗೆರೆ

ಎಸ್.ಆರ್.ಎಸ್. ವಿದ್ಯುತ್ ಸ್ವೀಕರಣಾ ಕೇಂದ್ರದಿಂದ ಹೊರಡುವ ಸರಸ್ವತಿ ಫೀಡರ್‌ನಲ್ಲಿ ಕೆ.ಯು.ಐ.ಡಿ.ಎಫ್.ಸಿ. ಬಿ.ಪಿ.ಕಂ.ವತಿಯಿಂದ ಜಲಸಿರಿ ಯೋಜನೆಯಡಿಯಲ್ಲಿ ನಿರಂತರ ಶುದ್ಧಕುಡಿಯುವ ನೀರಿನ ಸರಬರಾಜು ಯೋಜನೆ ಕಾಮಗಾರಿಯನ್ನು ಹಮ್ಮಿಕೊಂಡಿರುವುದರಿಂದ ಜೂನ್ 25 ರಂದು ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯವರೆಗೆ ಸರಸ್ವತಿ ಫೀಡರ್ ವ್ಯಾಪ್ತಿಯ ಸರಸ್ವತಿ ಬಡಾವಣೆ .ಎ ಮತ್ತು ಬಿ. ಬ್ಲಾಕ್, ಜಯನಗರ ಎ,ಬಿ& ಸಿ ಬ್ಲಾಕ್ ಭೂಮಿಕ ನಗರ ಜಯಂತ್ ಕಾನ್ವೆಂಟ್ ಕೆಎಸ್‌ಎಸ್ ಕಾಲೇಜ್ ಮತ್ತು ಸುತ್ತ ಮುತ್ತ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ವಿದ್ಯುತ್ ವ್ಯತ್ಯಯ: ಆವರಗೆರೆ ವಿದ್ಯುತ್ ವಿತರಣ ಕೇಂದ್ರದಲ್ಲಿ ತುರ್ತಾಗಿ ನಿರ್ವಾಹಣ ಕಾರ್ಯವನ್ನು ಹಮ್ಮಿಕೊಂಡಿರುವುದರಿಂದ ಜೂನ್ 25 ರಂದು ಬೆಳಿಗ್ಗೆ 10 ಗಂಟೆಯಿಂದ ಮದ್ಯಾಹ್ನ 2 ಗಂಟೆಯವರೆಗೆ ಆರ್.ಎಂ.ಸಿ. ಲಿಂಕ್ ರಸ್ತೆ, ಬಿ.ಟಿ. ಲೇಔಟ್, ಗುಜರಿ ಲೈನ್, ಬಂಬೂ ಬಜಾರ್, ಮಟ್ಟಿಕಲ್, ಬಿಡಿಓ ಕಛೇರಿ, ಇಮಾಮ್ ನಗರ, ಅಮರಪ್ಪನ ತೋಟ, ಆನೆಕೊಂಡ, ಎಲ್.ಬಿ.ಎಸ್. ನಗರ.ಟಿ.ಸಿ. ಲೇಔಟ್, ಬಿಟಿ ಲೇಔಟ್, ಕೆ.ಆರ್. ರಸ್ತೆ, ಇಮಾಮ್ ನಗರ, ಆನೆಕೊಂಡ, ಐನಳ್ಳಿ ಕಾಂಪೌಂಡ್, ಎಪಿಎಂಸಿ, ಭಾರತ್ ಕಾಲೋನಿ, ಶೇಖರಪ್ಪ ನಗರ ಹೆಚ್.ಕೆ.ಆರ್. ನಗರ, ಕಬ್ಬೂರು ಬಸಾಪುರ ನಗರ, ಆಣ್ಣಾ ನಗರ, ಬಸಾಪುರ ರಸ್ತೆ, ಗೋಶಾಲೆ, ಪಿ.ಬಿ. ರಸ್ತೆ, ರವಿ ಮಿಲ್ ಹಾಗೂ ಆವರಗೆರೆ, ಹೊನ್ನೂರು, ಐಗೂರು, ಮಲ್ಲಶೆಟ್ಟಿಹಳ್ಳಿ, ತೋಳಹುಣಸೆ, ದಾವಣಗೆರೆ ವಿಶ್ವವಿದ್ಯಾಲಯ ಗ್ರಾಮಗಳು ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂ ಪ್ರಕಟಣೆ ತಿಳಿಸಿದೆ.

ಉಪ್ಪಾರ ಸಂಘದಿಂದ ಪ್ರತಿಭಾ ಪುರಸ್ಕಾರ

» ಚಿತ್ರದುರ್ಗ

ತಾಲ್ಲೂಕು ಉಪ್ಪಾರ ಸಂಘದಿಂದ 2024–25 ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ. ಹಾಗೂ ದ್ವಿತೀಯ ಪಿ.ಯು.ಸಿ. ಪರೀಕ್ಷೆಯಲ್ಲಿ ಶೇ.85 ಕ್ಕೂ ಹೆಚ್ಚಿನ ಅಂಕಗಳನ್ನು ಗಳಿಸಿರುವ ವಿದ್ಯಾರ್ಥಿ–ವಿದ್ಯಾರ್ಥಿನಿಯರಿಗೆ ಜು. 7 ರಂದು ಮೆದೆಹಳ್ಳಿ ಗ್ರಾಮದಲ್ಲಿರುವ ಶಿವಮೂರ್ತಿ ಶಿವಾಚಾರ್ಯ ಲೇಔಟ್ ಪಕ್ಕದ ಜಾಗದಲ್ಲಿ ಪ್ರತಿಭಾ ಪುರಸ್ಕಾರ ಹಮ್ಮಿಕೊಳ್ಳಲಾಗಿದೆ.

ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ

ಜೂನ್ 27ರಂದು ಕೆಂಪೇಗೌಡ ಜಯಂತಿ

» ಚಿತ್ರದುರ್ಗ

ಜಿಲ್ಲಾಡಳಿತದ ವತಿಯಿಂದ ಇದೇ ಜೂನ್ 27ರಂದು ಬೆಳಿಗ್ಗೆ 11ಕ್ಕೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಾಡಪ್ರಭು ಕೆಂಪೇಗೌಡರ ಜಯಂತಿ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾಮಟ್ಟದಲ್ಲಿ ನಾಡಪ್ರಭು ಕೆಂಪೇಗೌಡ ಜಯಂತಿ ಕಾರ್ಯಕ್ರಮದ ಆಚರಣೆ ಅಂಗವಾಗಿ ಹಮ್ಮಿಕೊಂಡಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸರ್ಕಾರದ ವತಿಯಿಂದ ಆಚರಿಸಲಾಗುವ ಕೆಂಪೇಗೌಡ ಜಯಂತಿ ಕಾರ್ಯಕ್ರಮಕ್ಕೆ ಪ್ರತಿ ತಾಲ್ಲೂಕಿಗೆ ರೂ.1 ಲಕ್ಷ ವಿಶೇಷ ಅನುದಾನವನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿಬಿಎಂಪಿ) ವತಿಯಿಂದ ಬಿಡುಗಡೆ ಮಾಡಲಾಗಿದ್ದು, ಜೂನ್ 27ರಂದು ಜಿಲ್ಲಾಮಟ್ಟದಲ್ಲಿ, ತಾಲ್ಲೂಕುಮಟ್ಟದಲ್ಲಿ ಹಾಗೂ ಎಲ್ಲ ಶಾಲಾ–ಕಾಲೇಜುಗಳಲ್ಲಿಯೂ ನಾಡಪ್ರಭು ಕೆಂಪೇಗೌಡ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಬೇಕು ಎಂದು ಹೇಳಿದರು.

ನಾಡಪ್ರಭು ಕೆಂಪೇಗೌಡರ ಜೀವನ, ಸಾಧನೆ, ಕೊಡುಗೆಗಳ ಕುರಿತು ಶಾಲಾ–ಕಾಲೇಜುಗಳಲ್ಲಿ ಚರ್ಚಾ ಸ್ಪರ್ಧೆ, ಪ್ರಬಂಧ ಸ್ಪರ್ಧೆ, ಭಾಷಣ ಸ್ಪರ್ಧೆ ಸೇರಿದಂತೆ ವಿವಿಧ ಸ್ಪರ್ಧೆಗಳನ್ನು ಆಯೋಜಿಸಬೇಕು. ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಜಯಂತಿ ಕಾರ್ಯಕ್ರಮದಲ್ಲಿ ಬಹುಮಾನ ವಿತರಿಸಲು ಅಗತ್ಯ ಕ್ರಮವಹಿಸಬೇಕು ಎಂದು ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಯಂತಿ ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ, ಗೀತಗಾಯನ ಹಮ್ಮಿಕೊಳ್ಳಲಾಗುವುದು. ಸರ್ಕಾರಿ ಇಲಾಖೆ ಅಧಿಕಾರಿಗಳು ಹಾಗೂ ಸಿಬ್ಬಂದಿ ಕಾರ್ಯಕ್ರಮದಲ್ಲಿ ಕಡ್ಡಾಯವಾಗಿ ಭಾಗವಹಿಸಬೇಕು ಎಂದು ತಿಳಿಸಿದ ಅವರು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಮಹನೀಯರ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸಬೇಕು ಎಂದು ಮನವಿ ಮಾಡಿದರು.

ಸಭೆಯಲ್ಲಿ ತಹಶೀಲ್ದಾರ್ ಡಾ.ನಾಗವೇಣಿ, ಪದವಿಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಪುಟ್ಟಸ್ವಾಮಿ, ಶಾಲಾ ಶಿಕ್ಷಣ ಇಲಾಖೆ ಡಿವೈಪಿಸಿ ವೆಂಕಟೇಶ್, ಜಿಲ್ಲಾ ಒಕ್ಕಲಿಗರ ಸಂಘದ ಅಧ್ಯಕ್ಷ ಚೇತನ್, ಉಪಾಧ್ಯಕ್ಷ ಒ.ಎಲ್. ಮಂಜುಕುಮಾರ್, ಕಾರ್ಯದರ್ಶಿ ಜಗನ್ನಾಥ್,ನಿರ್ದೇಶಕರಾದ ಪರಮೇಶ್ವರ, ಜಿ.ದ್ಯಾಮಪ್ಪ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.

ಕಿಶೋರಿಯರಿಗೆ ಬ್ಯಾಗ್, ನೋಟ್ ಪುಸ್ತಕ ವಿತರಣೆ

» ಚಿತ್ರದುರ್ಗ

ವಿಮುಕ್ತಿ ವಿದ್ಯಾಸಂಸ್ಥೆ, ದಮ್ಮಾಕೇಂದ್ರದಲ್ಲಿ ಕಿಶೋರಿಯರಿಗೆ ಅಂತರರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ಬ್ಯಾಗ್ ಮತ್ತು ನೋಟ್ ಪುಸ್ತಕಗಳನ್ನು ವಿತರಣೆ ಮಾಡಲಾಯಿತು.

ದಮ್ಮಾಕೇಂದ್ರ, ವಿಮುಕ್ತಿ ವಿದ್ಯಾಸಂಸ್ಥೆ ಅಪ್ಪಿ ಯೋಜನೆ ಇವರ ವತಿಯಿಂದ ದಿನಾಂಕ: 23–06–2024 ರ ಭಾನುವಾರ ಹಮ್ಮಿಕೊಳ್ಳಲಾಗಿದ್ದ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ನಿವೃತ್ತ ಪ್ರಾಧ್ಯಾಪಕ ಡಾ.ನಟರಾಜ್ ಅವರು ಮಾತನಾಡಿ, ಕಿಶೋರಿಯರಿಗೆ ಆರೋಗ್ಯ, ಶುಚಿತ್ವ, ಸಮಾನತೆ ಮತ್ತು ಶಿಕ್ಷಣ ಕುರಿತು ಜಾಗೃತಿ ನೀಡುತ್ತಿರುವ ವಿಮುಕ್ತಿ ವಿದ್ಯಾಸಂಸ್ಥೆಯ ಕಾರ್ಯ ಶ್ಲಾಘನೀಯ ಎಂದರು.

ಗ್ರಾಮೀಣ ಭಾಗದ ಕಿಶೋರಿಯರನ್ನು ಗುರುತಿಸಿ, ಅವರಿಗೆ ಜಾಗೃತಿ, ಅರಿವಿನ ಶಿಕ್ಷಣ ನೀಡುವ ಮೂಲಕ ವಿಮುಕ್ತಿ ವಿದ್ಯಾಸಂಸ್ಥೆ ಕಿಶೋರಿಯರು ಭವಿಷ್ಯದಲ್ಲಿ ಕಂಡುಕೊಳ್ಳಬೇಕಾದ ಬದುಕಿನ ರೀತಿಗಳನ್ನು ಕ್ರೀಡೆ ಮತ್ತು ಪಠ್ಯದ ಮೂಲಕ ಅರಿವು ಮೂಡಿಸುತ್ತಿರುವುದು ಮಾದರಿಯಾಗಿದೆ ಎಂದರು. ನಗರ ಮತ್ತು ಗ್ರಾಮೀಣ ಭಾಗದ ಕಿಶೋರಿಯರ ಆರೋಗ್ಯ, ಶುಚಿತ್ವ, ಶಿಕ್ಷಣ ಮತ್ತು ಸಮಾನತೆಗಾಗಿ ಕೆಲಸ ಮಾಡುತ್ತಿರುವ ವಿಮುಕ್ತಿ ವಿದ್ಯಾಸಂಸ್ಥೆ ಬಾಲಕಿಯರಿಗೆ ಪ್ರೇರಣೆಯಾಗಿ ಕೆಲಸಮಾಡುತ್ತಿದ್ದು, ಕಿಶೋರಿಯರಿಗೂ ಕೂಡ ಬಹುಮುಖ್ಯ ಬದುಕಿದೆ ಎಂದು ಅರಿವು ಮೂಡಿಸುತ್ತಿರುವುದು ವಿಶೇಷ ಕಾರ್ಯವಾಗಿದೆ ಎಂದರು.

ವಿಮುಕ್ತಿ ವಿದ್ಯಾಸಂಸ್ಥೆಯ ನಿರ್ದೇಶಕರಾದ ಆರ್.ವಿಶ್ವಸಾಗರ್ ಅವರು ಮಾತನಾಡಿ, ಗ್ರಾಮೀಣ ಭಾಗದ ಕಿಶೋರಿಯರಲ್ಲಿ ಜಾಗೃತಿ ಮೂಡಿಸಲು ಕಳೆದೊಂದು ವರ್ಷದಿಂದ ವಿಮುಕ್ತಿ ವಿದ್ಯಾಸಂಸ್ಥೆಯ ವತಿಯಿಂದ ಕಾರ್ಯಯೋಜನೆಯನ್ನು ರೂಪಿಸಲಾಗಿದ್ದು, ಈಗಾಗಲೇ ಸುಮಾರು ಇಪ್ಪತ್ತರಿಂದ ಮೂವತ್ತು ಹಳ್ಳಿಗಳಲ್ಲಿ ಬಾಲಕಿಯರನ್ನು ಸಂಘಟಿಸಿ, ಕ್ರೀಡೆ, ಪಠ್ಯ ಮತ್ತು ಪಠ್ಯೇತರ ಚಟುವಟಿಕೆಗಳ ಅರಿವು ಮೂಡಿಸಲಾಗುತ್ತಿದೆ. ಈ ಕಾರ್ಯಕ್ರಮಕ್ಕೆ ಬಾಲಕಿಯರು ಮತ್ತು ಅವರ ಪೋಷಕರಿಂದ ಅತ್ಯುತ್ತಮವಾದ ಸ್ಪಂಧನೆ ಇದ್ದು, ಬಾಲಕಿಯರ ಸಮಾನತೆಗಾಗಿ ಚಿತ್ರದುರ್ಗ ನಗರದಲ್ಲಿ ಜಾಗೃತಿ ಜಾಥಾ ಮತ್ತು ಜಾಗೃತಿ ಸಮಾವೇಷವನ್ನು ಮಾಡುವ ಮೂಲಕ ಜಿಲ್ಲಾ ಆಡಳಿತದ ಗಮನ ಸೆಳೆಯುವ ಪ್ರಯತ್ನ ನಡೆಸಲಾಗಿದೆ ಎಂದರು.

ನೀರಿನ ಮಿತಬಳಕೆಯ ಬಗ್ಗೆ ಬೀದಿನಾಟಕದ ಮೂಲಕ ಜಾಗೃತಿ

» ಚಳ್ಳಕೆರೆ

ಗ್ರಾಮೀಣ ಭಾಗದಲ್ಲಿ ನೀರು, ವಿದ್ಯುತ್ ಅನಾವಶ್ಯಕವಾಗಿ ಬಳಸದೆ ವ್ಯರ್ತವಾಗುವುದನ್ನು ತಡೆಯುವ ನಿಟ್ಟಿನಲ್ಲಿ ಶ್ರೀಕ್ಷೇತ್ರಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬೀದಿನಾಟಕದ ಮೂಲಕ ಸ್ವಚ್ಚತಾ ಹಾಗೂ ನೀರು ಮಿತಬಳಕೆಯ ಬಗ್ಗೆ ಜಾಗೃತಿ ಮೂಡಿಸಲಾಯಿತು. ತಾಲ್ಲೂಕಿನ ಮೀರಸಾಬಿಹಳ್ಳಿ ವಲಯದ ದೊಡ್ಡೇರಿ ಗ್ರಾಮದಲ್ಲಿ ತಾಲ್ಲೂಕು ಯೋಜನಾಧಿಕಾರಿ ಶಶಿಕಲಾ ದೀಪಬೆಳಗುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ನಾಯಕನಹಟ್ಟಿಯ ಸಾಕ್ಷಿ ಕಲಾತಂಡ ಸ್ವಚ್ಚತೆ, ನೀರು, ಜ್ಞಾನವಿಕಾಸ ಯುಟ್ಯೂಬ್, ಕೌಟುಂಬಿಕ ಮತ್ತು ಮದ್ಯಪಾನದಿಂದ ಆಗುವ ಅನಾಹುತಗಳ ಬಗ್ಗೆ ನಾಟಕದ ಮೂಲಕ ಜಾಗೃತಿ ಮೂಡಿಸಲಾಯಿತು. ಮುಖ್ಯ ಶಿಕ್ಷಕಿ ಸುನಿತಾ, ಒಕ್ಕೂಟದ ಅಧ್ಯಕ್ಷೆ ಲಲಿತಾ, ಸೇವಾಪ್ರತಿನಿಧಿ ಜಯಲಕ್ಷ್ಮಿ, ಸಮನ್ವಾಧಿಕಾರಿ ಇಂದಿರಾಭವಾನಿ ಮುಂತಾದವರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T